ಸಂಪುಟ: 11 ಸಂಚಿಕೆ: 179 ಪುಟ: 4+2 ಬೆಲೆ : 3.00 ಗುರುವಾರ, ಆಗಸ್ಟ್ 20, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 179 Pages : 4+2 Rate : 3.00 Thursday , August 20, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಗದಗ ಮೀಡಿಯಾ ಕ್ರಿಕೆಟ್ ಲೀಗ್‌ಗೆ ಚಾಲನೆ: ವಿನ್ನರ್ಸ್ ವಿರುದ್ಧ ನೈಟ್ ರೈಡರ್ಸ್‌ಗೆ 7 ವಿಕೆಟ್ ಗೆಲುವು

# ನೈಟ್ ರೈಡರ್ಸ್, ರೂರಲ್ ಕಿಂಗ್ಸ್‌ಗೆ ಜಯ





**ವಿಜಯಸಾಕ್ಷಿ ಸುದ್ದಿ, ಗದಗ**

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ನಗರದ ವಿದ್ಯಾದಾನ ಸಮಿತಿಯ ಮೈದಾನದಲ್ಲಿ ಆಯೋಜಿಸಿರುವ ಗದಗ ಮೀಡಿಯಾ ಕ್ರಿಕೆಟ್ ಲೀಗ್‌ಗೆ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಸುರೇಶ ವಿ. ನಾಡಗೌಡರ ಟಾಸ್ ಮಾಡುವ ಮೂಲಕ ಚಾಲನೆ ನೀಡಿದರು. ಲೀಗ್‌ನ ಉದ್ಘಾಟನಾ ಪಂದ್ಯದಲ್ಲಿ ನೈಟ್ ರೈಡರ್ಸ್ ತಂಡ ವಿನ್ನರ್ಸ್ ತಂಡವನ್ನು 7 ವಿಕೆಟ್‌ಗಳಿಂದ ಮಣಿಸಿತು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ವಿನ್ನರ್ಸ್ ತಂಡ ನಿಗದಿತ 10 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 76 ರನ್ ಗಳಿಸಿತು. ನಾಯಕ ಅನಿಲ ತೆಂಬದಮನಿ 35 ರನ್ ಗಳಿಸಿ ತಂಡದ ಮೊತ್ತ ಹೆಚ್ಚಿಸಿದರು. ನೈಟ್ ರೈಡರ್ಸ್ ಪರ ಮಂಜು ಪತ್ತಾರ 3 ವಿಕೆಟ್ ಪಡೆದರೆ, ಸುರೇಶ ಕಡ್ಲಿಮಟ್ಟಿ, ಅರುಣಕುಮಾರ ಹಿರೇಮಠ ಹಾಗೂ ವಿಜಯ ಸೊರಟೂರ ತಲಾ ಒಂದು ವಿಕೆಟ್ ಪಡೆದರು.

77 ರನ್‌ಗಳ ಗುರಿ ಬೆನ್ನತ್ತಿದ ನೈಟ್ ರೈಡರ್ಸ್ ತಂಡ 7 ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿತು. ನಾಯಕ ಸುರೇಶ ಕಡ್ಲಿಮಟ್ಟಿ 38, ಅರುಣಕುಮಾರ ಹಿರೇಮಠ 13 ಹಾಗೂ ಮಂಜು ಪತ್ತಾರ 12 ರನ್ ಗಳಿಸಿ ತಂಡವನ್ನು ಗೆಲುವಿನ ದಡ ಸೇರಿಸಿದರು. ವಿನ್ನರ್ಸ್ ಪರ ಅನಿಲ ತೆಂಬದಮನಿ, ಪರಮೇಶ ಲಮಾಣಿ ಹಾಗೂ ಅಶೋಕ ಹೂಗಾರ ತಲಾ ಒಂದು ವಿಕೆಟ್ ಪಡೆದರು. 3 ವಿಕೆಟ್ ಹಾಗೂ 12 ರನ್ ಗಳಿಸಿದ ಮಂಜು ಪತ್ತಾರ ಆಲ್‌ರೌಂಡ್ ಪ್ರದರ್ಶನದೊಂದಿಗೆ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

**ಆರ್‌ಸಿಬಿಗೆ ಶಾಕ್; ರೂರಲ್ ಕಿಂಗ್ಸ್ ಜಯಭೇರಿ**

ಲೀಗ್‌ನ ಎರಡನೇ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ರೂರಲ್ ಕಿಂಗ್ಸ್ ತಂಡ 7 ವಿಕೆಟ್‌ಗಳ ಅಂತರದಿಂದ ಜಯಗಳಿಸಿತು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ತಂಡ ನಿಗದಿತ 10 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 89 ರನ್ ಗಳಿಸಿತು. ವಿನಾಯಕ ಚೌಡಾಪೂರ 31, ಫಿರೋಜ್ ಮೋಮಿನ್ 19 ಹಾಗೂ ರಾಘವೇಂದ್ರ ಕುಲಕರ್ಣಿ 13 ರನ್ ಗಳಿಸಿದರು. ರೂರಲ್ ಕಿಂಗ್ಸ್ ಪರ ಶಿವಾನಂದ ಹಿರೇಮಠ 4, ನಿಂಗನಗೌಡ ಹನಮಗೌಡ್ರ ಹಾಗೂ ಸಂಜೀವ್ ಪಾಂಡ್ರೆ ತಲಾ ಒಂದು ವಿಕೆಟ್ ಪಡೆದರು.

90 ರನ್‌ಗಳ ಗುರಿ ಬೆನ್ನತ್ತಿದ ರೂರಲ್ ಕಿಂಗ್ಸ್ 7 ವಿಕೆಟ್‌ಗಳ ಅಂತರದಲ್ಲಿ ಗೆಲುವು ಸಾಧಿಸಿತು. ಶಿವಾನಂದ ಹಿರೇಮಠ 37 ಹಾಗೂ ನಿಂಗನಗೌಡ ಹನಮಗೌಡ್ರ 18 ರನ್ ಗಳಿಸಿದರು. ಆರ್‌ಸಿಬಿ ಪರ ಗಿರೀಶ ಕಮ್ಮಾರ, ಶಿವಕುಮಾರ ಕುಷ್ಟಗಿ ಹಾಗೂ ಫಿರೋಜ್ ಮೋಮಿನ್ ತಲಾ ಒಂದು ವಿಕೆಟ್ ಪಡೆದರು. 4 ವಿಕೆಟ್ ಹಾಗೂ 37 ರನ್ ಗಳಿಸಿದ ಶಿವಾನಂದ ಹಿರೇಮಠ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಇದಕ್ಕೂ ಮುನ್ನ ಗದಗ ಮೀಡಿಯಾ ಕ್ರಿಕೆಟ್ ಲೀಗ್‌ಗೆ ಚಾಲನೆ ನೀಡಿ ಮಾತನಾಡಿದ ಆರ್‌ಡಿಪಿಆರ್ ವಿವಿ ಕುಲಪತಿ ಸುರೇಶ ವಿ. ನಾಡಗೌಡರ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಶಾಸಕಾಂಗ, ಕಾರ್ಯಾಂಗ ಹಾಗೂ ನ್ಯಾಯಾಂಗದಂತೆಯೇ ಪತ್ರಿಕಾರಂಗಕ್ಕೂ ಮಹತ್ವದ ಸ್ಥಾನವಿದೆ.

ಸಮಾಜದ ಹಲವು ಮಹತ್ವದ ವಿಷಯಗಳ ಮೇಲೆ ಬೆಳಕು ಚೆಲ್ಲುವ ಮೂಲಕ ಪತ್ರಿಕೋದ್ಯಮ ಅಪಾರ ಕೊಡುಗೆ ನೀಡುತ್ತಿದೆ ಎಂದರು.

> **ಪತ್ರಕರ್ತರಲ್ಲಿ ವೃತ್ತಿಬದ್ಧತೆ ಹೆಚ್ಚಬೇಕು. ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯದಲ್ಲಿ ಪತ್ರಿಕಾ ದಿನಾಚರಣೆ, ವಿಚಾರ ಸಂಕಿರಣದಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಪತ್ರಿಕೋದ್ಯಮದ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಯಿಂದ ಅಗತ್ಯ ನೆರವು ನೀಡಲಾಗುವುದು.**
>
> – **ಸುರೇಶ ವಿ. ನಾಡಗೌಡರ,**
> ಕುಲಪತಿ, ಆರ್‌ಡಿಪಿಆರ್ ವಿಶ್ವವಿದ್ಯಾಲಯ

ಕಾರ್ಯಕ್ರಮದಲ್ಲಿ ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯ ಪಿಎಸ್‌ಐ ಮಾರುತಿ ಜೋಗದಂಡಕರ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ರಾಜ್ಯ ಕಾರ್ಯಕಾರಣಿ ಸದಸ್ಯ ಅರುಣಕುಮಾರ ಹಿರೇಮಠ, ವಿನ್ನರ್ಸ್ ತಂಡದ ಮಾಲೀಕರಾದ ಅನಂತ ಕಾರ್ಕಳ, ಸುನೀಲ್ ತೆಂಬದಮನಿ, ಟಿ.ಎನ್. ಭಾಂಡಗೆ, ರೂರಲ್ ಕಿಂಗ್ಸ್‌ನ ಜಗದೀಶ ಪೂಜಾರ, ಆರ್‌ಸಿಬಿಯ ಅಜಿತ ಹೊಂಬಾಳಿ, ನೈಟ್ ರೈಡರ್ಸ್ ತಂಡದ ಎಚ್.ಎಂ. ಶರೀಫನವರ, ಆನಂದ ಸಾಲಿಗ್ರಾಮ, ಆನಂದಯ್ಯ ವಿರಕ್ತಮಠ ಸೇರಿದಂತೆ ಕಾನಿಪ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಜರಿದ್ದರು. ಪತ್ರಕರ್ತ ಶಿವಕುಮಾರ ಕುಷ್ಟಗಿ ಕಾರ್ಯಕ್ರಮ ನಿರೂಪಿಸಿದರು.

## ಕಾಡುಹಂದಿಗಳ ಹಾವಳಿ; ಮೆಕ್ಕೆಜೋಳ ಬೆಳೆ ನಾಶ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಬೆಣಕಲ್ಲು ಗ್ರಾಮದಲ್ಲಿ ಕಾಡುಹಂದಿಗಳ ಹಾವಳಿ ಹೆಚ್ಚಾಗಿದ್ದು, ರೈತರ ಮೆಕ್ಕೆಜೋಳ ಬೆಳೆಗಳಿಗೆ ಹಾನಿಯಾಗಿದೆ. ಗ್ರಾಮದ ರೈತ ಟಿ. ಮೇಘರಾಜ ಅವರು 2.50 ಎಕರೆ ಜಮೀನಿನಲ್ಲಿ ಬೆಳೆದಿದ್ದ ಮೆಕ್ಕೆಜೋಳ ಬೆಳೆಯನ್ನು ಕಾಡುಹಂದಿಗಳು ಹಾಳು ಮಾಡಿವೆ. ತೆನೆ ಬರುವ ಹಂತದಲ್ಲಿದ್ದ ಬೆಳೆಯ ಬಹುತೇಕ ಭಾಗ ನಾಶವಾಗಿದ್ದು, ರೈತರು ಆತಂಕಕ್ಕೆ ಒಳಗಾಗಿದ್ದಾರೆ.

ಕಳೆದ 1520 ದಿನಗಳಿಂದ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವ ರೈತರ ಜಮೀನುಗಳಲ್ಲಿ ಕಾಡುಹಂದಿಗಳ ಹಾವಳಿ ಹೆಚ್ಚಾಗಿದೆ. ಹಗಲು-ರಾತ್ರಿ ಹೊಲ ಕಾಯುತ್ತಿದ್ದರೂ ಹಾವಳಿ ನಿಯಂತ್ರಣಕ್ಕೆ ಬರುತ್ತಿಲ್ಲ. ಕಷ್ಟಪಟ್ಟು ಬೆಳೆದ ಬೆಳೆ ಕಣ್ಣೆದುರೇ ನಾಶವಾಗುತ್ತಿರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಈಗಾಗಲೇ ಬರಗಾಲದ ಹೊಡೆತದಿಂದ ತತ್ತರಿಸಿರುವ ರೈತರಿಗೆ ಕಾಡುಹಂದಿಗಳ ಹಾವಳಿ ಮತ್ತೊಂದು ಸಮಸ್ಯೆಯಾಗಿ ಪರಿಣಮಿಸಿದೆ. ಸಂಬಂಧಪಟ್ಟ ಅರಣ್ಯ ಇಲಾಖೆ ಹಾಗೂ ಅಧಿಕಾರಿಗಳು ಕಾಡುಹಂದಿಗಳ ಹಾವಳಿ ನಿಯಂತ್ರಣಕ್ಕೆ ಕ್ರಮ ಕೈಗೊಂಡು, ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

### ಆ.28ರಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜಯಂತಿ ಆಚರಣೆ

## ಅರ್ಥಪೂರ್ಣವಾಗಿ ನಾರಾಯಣ ಗುರು ಜಯಂತಿ ಆಚರಿಸಿ



**ವಿಜಯಸಾಕ್ಷಿ ಸುದ್ದಿ ಗದಗ**

ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಯನ್ನು ಆ.28ರಂದು ಅರ್ಥಪೂರ್ಣ ವಾಗಿ, ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರು ಹಾಗೂ ಸಾರ್ವಜನಿಕರಿಗೆ ವಿತರಿಸಬೇಕು. ಶಾಲಾ-ಕಾಲೇಜುಗಳು, ಗ್ರಾಮ ಪಂಚಾಯಿತಿಗಳು ಹಾಗೂ ತಾಲೂಕು ಮಟ್ಟದಲ್ಲಿಯೂ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಯನ್ನು ಆಚರಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

**ಪ್ರತಿಭಾವಂತರು, ಸಾಧಕರಿಗೆ ಸನ್ಮಾನ:** ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳು, ಪದವಿ ಹಂತದಲ್ಲಿ ಚಿನ್ನದ ಪದಕ ಪಡೆದವರು, ಕ್ರೀಡಾ ಕ್ಷೇತ್ರದಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದವರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಮಾಜದ ಹಿರಿಯರನ್ನು ಜಯಂತಿ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಬ್ರಹ್ಮಶ್ರೀ ನಾರಾಯಣ ಗುರುಗಳ ಜೀವನ, ಚಿಂತನೆ ಹಾಗೂ ಸಾಮಾಜಿಕ ಕೊಡುಗೆಗಳ ಕುರಿತು ಆಳವಾದ ಅಧ್ಯಯನ ನಡೆಸಿದವರಿಂದ ವಿಶೇಷ ಉಪನ್ಯಾಸ ಆಯೋಜಿಸುವಂತೆ ತಿಳಿಸಿದರು.

ಕಾರ್ಯಕ್ರಮದ ವೇದಿಕೆ, ಊಟೋಪಹಾರ ಸೇರಿದಂತೆ ಅಗತ್ಯ ವ್ಯವಸ್ಥೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಇದೇ ಸಂದರ್ಭದಲ್ಲಿ ಬ್ರಹ್ಮಶ್ರೀ ನಾರಾಯಣ ಗುರುಗಳ ಕುರಿತು ಪುಸ್ತಕ ಬಿಡುಗಡೆ ಮಾಡುವ ಬಗ್ಗೆಯೂ ಚರ್ಚೆ ನಡೆಯಿತು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧೀಕ್ಷಕ ರಾಜಕುಮಾರ ಸೊಪಡ್ಲ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಗಣ್ಯರು ಹಾಗೂ ಹಿರಿಯರು ಉಪಸ್ಥಿತರಿದ್ದರು.

> **ಬ್ರಹ್ಮಶ್ರೀ ನಾರಾಯಣ ಗುರುಗಳ ತತ್ವ, ಆದರ್ಶ ಹಾಗೂ ಸಾಮಾಜಿಕ ಸಂದೇಶಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಜಯಂತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ ಅರ್ಥಪೂರ್ಣವಾಗಿ ನಡೆಸಬೇಕು.**
>
> – **ಡಾ. ದುರಗೇಶ್ ಕೆ.ಆರ್.,**
> ಅಪರ ಜಿಲ್ಲಾಧಿಕಾರಿ

### ಹಗಲು-ರಾತ್ರಿ ಭಾರಿ ವಾಹನಗಳ ಸಂಚಾರ; ಕ್ರಮಕ್ಕೆ ಸಂಘಟನೆ ಆಗ್ರಹ


## ಕಳಸಾಪುರ-ನಾಗಾವಿಯಲ್ಲಿ ಅಕ್ರಮ ಗಣಿಗಾರಿಕೆಗೆ ಬ್ರೇಕ್ ಯಾವಾಗ?

**ವಿಜಯಸಾಕ್ಷಿ ಸುದ್ದಿ ಗದಗ**

ತಾಲೂಕಿನ ಕಳಸಾಪುರ ಹಾಗೂ ನಾಗಾವಿ ಸುತ್ತಮುತ್ತಲಿನ ಗುಡ್ಡಗಾಡು ಪ್ರದೇಶಗಳಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆ ಮತ್ತು ಮೊರಂ ಲೂಟಿಯನ್ನು ತಕ್ಷಣ ತಡೆಗಟ್ಟುವಂತೆ ಆಗ್ರಹಿಸಿ ಜೈ ಭೀಮ್ ರಾಜ್ಯ ಸಂಘರ್ಷ ಸಮಿತಿ ವತಿಯಿಂದ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಭೂವಿಜ್ಞಾನಿಗಳಿಗೆ ಮನವಿ ಸಲ್ಲಿಸಲಾಯಿತು. ಕಳಸಾಪುರನಾಗಾವಿ ಭಾಗದಲ್ಲಿ ರಾಜಾರೋಷವಾಗಿ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದು, ಇದರಿಂದ ನೈಸರ್ಗಿಕ ಸಂಪತ್ತು ನಾಶವಾಗುವುದರ ಜತೆಗೆ ವನ್ಯಜೀವಿಗಳ ಆವಾಸಸ್ಥಾನಕ್ಕೂ ಧಕ್ಕೆಯಾಗುತ್ತಿದೆ. ಹಗಲು-ರಾತ್ರಿ ಭಾರಿ ವಾಹನಗಳು ಅತಿವೇಗ ಹಾಗೂ ಕರ್ಕಶ ಶಬ್ದದೊಂದಿಗೆ ಸಂಚರಿಸುತ್ತಿರುವುದರಿಂದ ಧೂಳಿನ ಮಾಲಿನ್ಯ ಉಂಟಾಗಿ ಮಕ್ಕಳು, ವೃದ್ಧರು ಸೇರಿದಂತೆ ಸಾರ್ವಜನಿಕರ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ ಎಂದು ಸಮಿತಿ ಆರೋಪಿಸಿದೆ. ಅಕ್ರಮ ಗಣಿಗಾರಿಕೆ ಕುರಿತು ಮಾಹಿತಿ ಇದ್ದರೂ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಕೆಲ ಅಧಿಕಾರಿಗಳು ಹಾಗೂ ಹೊರಗುತ್ತಿಗೆ ಸಿಬ್ಬಂದಿ ದಂಧೆಕೋರರೊಂದಿಗೆ ಶಾಮೀಲಾಗಿರುವ ಶಂಕೆಯಿದ್ದು, ಅಕ್ರಮವಾಗಿ ಸಂಚರಿಸುವ ವಾಹನಗಳಿಗೆ ನಾಮಕಾವಸ್ಥೆ ದಂಡ ವಿಧಿಸಿ ಬಿಡಲಾಗುತ್ತಿದೆ ಎಂದು ಸಮಿತಿ ದೂರಿದೆ.

ಕಳಸಾಪುರನಾಗಾವಿ ಸುತ್ತಮುತ್ತಲಿನ ಅಕ್ರಮ ಗಣಿಗಾರಿಕೆಯನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಬೇಕು. ಕರ್ತವ್ಯಲೋಪ ಎಸಗಿದ ಹಾಗೂ ಅಕ್ರಮಕ್ಕೆ ಸಾಥ್ ನೀಡಿದ ಅಧಿಕಾರಿಗಳು, ಸಿಬ್ಬಂದಿ ವಿರುದ್ಧ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು. ಅಕ್ರಮ ಗಣಿಗಾರಿಕೆಗೆ ಬಳಸುತ್ತಿರುವ ಜೆಸಿಬಿ, ಹಿಟಾಚಿ ಹಾಗೂ ಟಿಪ್ಪರ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು. ಅಕ್ರಮದಲ್ಲಿ ತೊಡಗಿರುವ ವ್ಯಕ್ತಿಗಳು, ಜಮೀನು ಹಾಗೂ ವಾಹನ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ಸಮಿತಿ ಆಗ್ರಹಿಸಿದೆ. ಈ ಸಂದರ್ಭದಲ್ಲಿ ಸಮಿತಿಯ ಉಪಾಧ್ಯಕ್ಷ ಮಂಜುನಾಥ ಎಫ್. ತೌಜಲ್, ರೋಣ ತಾಲೂಕು ಅಧ್ಯಕ್ಷ ಬಸವರಾಜ ಬದಾಮಿ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ರಾಷ್ಟ್ರಿನ್ ಜೋಸೆಫ್, ರಾಜೇಶ ವಿ. ಶೆಟ್ಟ್, ಇಮಾಮಹುಸೇನ್ ಕುನ್ನಿಬಾವಿ, ಸಮೀರಅಹ್ಮದ್ ಕುನ್ನಿಬಾವಿ, ಬಾಬು ಬಳ್ಳಾರಿ, ಮಂಜುನಾಥ ಸಂದಿಮನಿ, ಪ್ರೇಮಕುಮಾರ ಹುಬ್ಬಳ್ಳಿ, ಮಂಜುನಾಥ ಸುಂಕದ, ಶ್ರೀಕಾಂತ ಹಲವಾಗಲಿ, ಹೇಮಂತ ಹುಬ್ಬಳ್ಳಿ, ವಿರುಪಾಕ್ಷ ಗೌಡರ, ಗಿರೀಶ ಚಳಗೇರಿ, ರಫೀಕ ನವಲಗುಂದ, ಫರದೀನ ಕಾಟಾಪುರ ಹಾಗೂ ಮಲ್ಲೇಶ ಮೇಳದಾಳಮಠ ಉಪಸ್ಥಿತರಿದ್ದರು.

> **ಅಕ್ರಮ ಗಣಿಗಾರಿಕೆಗೆ ಕೂಡಲೇ ಕಡಿವಾಣ ಹಾಕಬೇಕು. ಇಲ್ಲವಾದರೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟಾವಧಿ ಧರಣಿ ಸೇರಿದಂತೆ ಉಗ್ರ ಹೋರಾಟ ನಡೆಸಲಾಗುವುದು.**
>
> – **ಗಣೇಶ್ ಹುಬ್ಬಳ್ಳಿ,** ಜೈ ಭೀಮ್ ರಾಜ್ಯ ಸಂಘರ್ಷ ಸಮಿತಿ ಅಧ್ಯಕ್ಷ



**ಗದಗ ನಗರದ ಗ್ರಾಮದೇವತೆಗಳಾದ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗಮ್ಮ ದೇವಿಯರ 12 ವರ್ಷಕ್ಕೊಮ್ಮೆ ನಡೆಯುವ ಹರಿಜಾತ್ರಾ ಮಹೋತ್ಸವದ ಅಂಗವಾಗಿ ಆ.20ರಂದು ಸಂಜೆ 7 ಗಂಟೆಗೆ ಸಭಾ ಕಾರ್ಯಕ್ರಮ ಆಯೋಜಿಸಲಾಗಿದೆ**






### ಮುಂದೆ ಸಾಗದ ರಥದಿಂದ ಆರಂಭವಾಯ್ತು 12 ವರ್ಷಕ್ಕೊಮ್ಮೆ ನಡೆಯುವ ಹರಿಜಾತ್ರೆ | ಆ.28ರವರೆಗೆ ನಡೆಯುವ ಹರಿಜಾತ್ರೆ ನಿಮಿತ್ತ ಲೇಖನ

# ದ್ಯಾಮವ್ವನಕಟ್ಟಿಯ 206 ವರ್ಷಗಳ ದೈವೀ ಇತಿಹಾಸ

ನಗರದ ಒಕ್ಕಲಗೇರಿ ಓಣಿಯ ಶ್ರೀ ದ್ಯಾಮವ್ವನಕಟ್ಟಿ ಗ್ರಾಮದೇವತೆಯ ಕ್ಷೇತ್ರಕ್ಕೆ ಸುಮಾರು ಎರಡು ಶತಮಾನಗಳ ಇತಿಹಾಸವಿದೆ. ಪುಟ್ಟ ಮಣ್ಣಿನ ಗುಡಿಯಿಂದ ಆರಂಭಗೊಂಡ ಈ ಕ್ಷೇತ್ರ ಇಂದು ಸಾವಿರಾರು ಭಕ್ತರ ಆರಾಧನಾ ಕೇಂದ್ರವಾಗಿದೆ. ಇಲ್ಲಿನ ಜಗಲಿಕಟ್ಟಿ ಮೇಲಿರುವ ಐದು ಅಡಿ ಎತ್ತರದ ಬೃಹತ್ ರಥದ ಕಳಸವು 206 ವರ್ಷಗಳ ಹಿಂದಿನ ಇತಿಹಾಸಕ್ಕೆ ಜೀವಂತ ಸಾಕ್ಷಿಯಾಗಿ ನಿಂತಿದೆ.

ಗದಗದ ಗ್ರಾಮದೇವತೆಗಳ ಹರಿಜಾತ್ರೆ ಕೇವಲ ಧಾರ್ಮಿಕ ಆಚರಣೆಯಲ್ಲ. ಇದು ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ನಂಬಿಕೆ, ಹರಕೆ, ಸಂಪ್ರದಾಯ ಮತ್ತು ಸಾಮಾಜಿಕ ಸಾಮರಸ್ಯದ ಪ್ರತೀಕ. 2026ರ ಹರಿಜಾತ್ರೋತ್ಸವ ಆಗಸ್ಟ್ 18ರಿಂದ 28ರವರೆಗೆ ನಡೆಯುತ್ತಿದ್ದು, ಗದಗ-ಬೆಟಗೇರಿ ನಗರವೇ ಜಗನ್ಮಾತೆಯ ಆರಾಧನೆಯಲ್ಲಿ ತೊಡಗಿದೆ.

ಆದಿಶಕ್ತಿಗೆ ನಿರ್ದಿಷ್ಟ ನಾಮರೂಪವಿಲ್ಲ ಎಂಬ ಆಧ್ಯಾತ್ಮಿಕ ಪರಿಕಲ್ಪನೆಯ ಪ್ರತಿರೂಪದಂತೆ ದ್ಯಾಮವ್ವನಕಟ್ಟಿ ಕಾಣುತ್ತದೆ. ಇಲ್ಲಿನ ಗರ್ಭಗುಡಿಯಲ್ಲಿ ಭವ್ಯ ಮೂರ್ತಿಯ ಬದಲಾಗಿ ಜಗಲಿಯ ಮೇಲಿರುವ ಗದ್ದುಗೆ ಹಾಗೂ ಅದರ ಮೇಲೆ ಗ್ರಾಮದೇವತೆಯ ಪಾದುಕೆಗಳೇ ಪ್ರಮುಖ ಆರಾಧನಾ ಸ್ವರೂಪ. ಭಕ್ತರ ಅನುಕೂಲಕ್ಕಾಗಿ ಆದಿಶಕ್ತಿಯ ಭಾವಚಿತ್ರವನ್ನು ಇರಿಸಲಾಗಿದ್ದರೂ, ಪಾದಗಟ್ಟಿಯೇ ಕ್ಷೇತ್ರದ ಮೂಲ ಆರಾಧನಾ ಕೇಂದ್ರವಾಗಿದೆ.

ಹಳೆಯ ಕೃತಪುರ ಗ್ರಾಮದಲ್ಲಿ ಗ್ರಾಮದೇವತೆಯರಿಗಾಗಿ ಇದ್ದ ಪುಟ್ಟ ಮಣ್ಣಿನ ಗುಡಿಯೇ ಮುಂದೆ



ದ್ಯಾಮವ್ವನಕಟ್ಟಿಯಾಗಿ ಪ್ರಸಿದ್ಧಿಯಾಯಿತು. ಕಿಲ್ಲಾ ಓಣಿಯಿಂದ ಗ್ರಾಮದೇವತೆಗಳನ್ನು ತವರು ಮನೆಗೆ ಬರುವ ಹೆಣ್ಣುಮಕ್ಕಳಂತೆ ವಾದ್ಯಮೇಳದೊಂದಿಗೆ ಒಕ್ಕಲಗೇರಿಗೆ ಕರೆತರುವ ಸಂಪ್ರದಾಯವಿತ್ತು. ಇದೇ ಕಾರಣಕ್ಕೆ ದ್ಯಾಮವ್ವ-ದುರಗವ್ವ ಗ್ರಾಮದೇವತೆಗಳ ತವರುಮನೆ ಎಂಬ ಭಾವನೆ ಜನಮನದಲ್ಲಿ ಗಟ್ಟಿಯಾಯಿತು.

ಸುಮಾರು ಆರು-ಏಳು ದಶಕಗಳ ಹಿಂದೆ ಅಬ್ಬಿಗೇರಿ ಮನೆತನದ ಶ್ರೀ ಬಸಪ್ಪ ಕರಬಸಪ್ಪ ಅಬ್ಬಿಗೇರಿ ಅವರು ಪುಟ್ಟ ಮಣ್ಣಿನ ಗುಡಿಯನ್ನು ಬೃಹತ್ ದೇವಾಲಯವನ್ನಾಗಿ ನಿರ್ಮಿಸಲು ಮುಂದಾದರು. ಸಂಗಯ್ಯ ಗುಡ್ಡಿಮಠ, ವಿರುಪಾಕ್ಷಗೌಡ ಪೊಲೀಸ್ ಪಾಟೀಲ, ನಾಗಯ್ಯ ಶಿವಪ್ಪಯ್ಯನಮಠ, ಯಲ್ಲಪ್ಪ ಗುಗ್ಗರಿ, ಶಿವಪ್ಪ ಮಾನ್ವಿ, ಫಕ್ಕೀರಪ್ಪ ಕಂಬಳಿ ಸೇರಿದಂತೆ ವಿವಿಧ ಸಮುದಾಯಗಳ ಅನೇಕರು ಕೈಜೋಡಿಸಿದರು. ಹೀಗಾಗಿ ದ್ಯಾಮವ್ವನಕಟ್ಟಿ ಸರ್ವರ ಭಕ್ತಿಯ ಕ್ಷೇತ್ರವಾಗಿ



ಬೆಳೆಯಿತು.

ಈ ಕ್ಷೇತ್ರದ ಇತಿಹಾಸದಲ್ಲಿ 1820ರ ರಥದ ಕಳಸಕ್ಕೆ ವಿಶೇಷ ಸ್ಥಾನವಿದೆ. ಕಳಸದ ಮೇಲಿನ ಲಿಖಿತ ಉಲ್ಲೇಖದ ಪ್ರಕಾರ, 1820, ಆಗಸ್ಟ್ 3, ಮಾನ್ವಿಯವರು ಕೊಡಿಸಿದ್ದು, ಗ್ರಾಮದೇವತೆಯರ ರಥದ ಕಳಸ ಎಂಬ ದಾಖಲೆಯಿದೆ. ಆಗ 18 ಗಾಲಿಯ ಬೃಹತ್ ರಥದಲ್ಲಿ ಗ್ರಾಮದೇವತೆಗಳನ್ನು ಪ್ರತಿಷ್ಠಾಪಿಸಿ ಪ್ರಮುಖ ಬೀದಿಗಳಲ್ಲಿ ರಥೋತ್ಸವ ನಡೆಸಲಾಗುತ್ತಿತ್ತು.

ಆದರೆ ಮೂರನೇ ವರ್ಷದ ರಥೋತ್ಸವದಲ್ಲಿ ಒಕ್ಕಲಗೇರಿಯ ದ್ಯಾಮವ್ವನ ಪಾದಗಟ್ಟಿಗೆ ಬಂದ ರಥ ಮುಂದೆ ಸಾಗಲಿಲ್ಲ ಎನ್ನುವುದು ಕ್ಷೇತ್ರದ ನಂಬಿಕೆ. ಎಷ್ಟೇ ಪ್ರಯತ್ನಿಸಿದರೂ ರಥ ಕದಲದ ಹಿನ್ನೆಲೆಯಲ್ಲಿ, ಪ್ರತಿವರ್ಷ ರಥೋತ್ಸವ ನಡೆಸುವ ಬದಲು 12 ವರ್ಷಕ್ಕೊಮ್ಮೆ ಹರಕೆ ತೀರಿಸುವ ಜಾತ್ರೆ ನಡೆಸಲು ದೈವದ ಜನರು ನಿರ್ಧರಿಸಿದರು. ರಥದ ಕಳಸವನ್ನು ದ್ಯಾಮವ್ವನ ಜಗಲಿಯ ಮೇಲಿನ ಗದ್ದುಗೆಯಲ್ಲಿ ಪ್ರತಿಷ್ಠಾಪಿಸಿ ಪೂಜಿಸುವ ಸಂಪ್ರದಾಯವೂ ಅಂದಿನಿಂದ ಆರಂಭವಾಯಿತು. ಹೀಗೆ ಹರಕೆ ಜಾತ್ರೆ ಮುಂದೆ ಹರಿಜಾತ್ರೆಯಾಗಿ ಪ್ರಸಿದ್ಧಿಯಾಯಿತು.

ಹರಿಜಾತ್ರೆಯಲ್ಲಿ ಗ್ರಾಮದೇವತೆಗಳ ಮೂರ್ತಿಗಳಿಗೆ ಬಣ್ಣ-ಅಲಂಕಾರ ಮಾಡಿ ತಡರಾತ್ರಿ ಕಿಲ್ಲಾ ಓಣಿಯಿಂದ ಒಕ್ಕಲಗೇರಿಗೆ ಕರೆತರಲಾಗುತ್ತದೆ. ಬೆಳಗಿನ ಜಾವ ಪ್ರತಿಷ್ಠಾಪಿಸಿ ಕಣ್ಣು ಬರೆಯುವ ವಿಶೇಷ ವಿಧಿ ನೆರವೇರಿಸಲಾಗುತ್ತದೆ. ಕನ್ನಡಿಯಲ್ಲಿ ಪ್ರತಿಬಿಂಬ ನೋಡುತ್ತಾ ಕಣ್ಣು ಬರೆಯುವುದು ಇಲ್ಲಿನ ಅಪರೂಪದ ಆಚರಣೆ. ಒಂಬತ್ತು ದಿನಗಳ ಕಾಲ ಭಕ್ತರು ವಿವಿಧ ನಿಯಮಗಳನ್ನು ಪಾಲಿಸುತ್ತಾರೆ. ಉಡಿ ತುಂಬುವುದು, ಕಾಯಿ ಒಡೆಯುವುದು, ಭಂಡಾರ ಲೇಪಿಸುವುದು, ಮೆರವಣಿಗೆ ಸೇರಿದಂತೆ ಹಲವು ಧಾರ್ಮಿಕ ವಿಧಿಗಳು ನಡೆಯುತ್ತವೆ. ಈ ಜಾತ್ರೆ ಎಲ್ಲ ಜಾತಿ-ಧರ್ಮದವರಿಗೂ ಮುಕ್ತವಾಗಿದ್ದು, ಹರಕೆ ತೀರಿಸುವುದೇ ಇದರ ಮೂಲ ಆಶಯವಾಗಿದೆ.

2026ರ ಹರಿಜಾತ್ರೆಯ ಅಂಗವಾಗಿ ಆಗಸ್ಟ್ 18ರಿಂದ ಉಡಿ ತುಂಬುವ ಕಾರ್ಯಕ್ರಮ ಆರಂಭಗೊಂಡಿದ್ದು, ಆಗಸ್ಟ್ 25ರಂದು ಊರ ದೇವರಿಗೆ ಉಡಿ ತುಂಬಿ ಕಾಯಿ ಒಡೆಯಲಾಗುತ್ತದೆ. ಆಗಸ್ಟ್ 26ರಂದು ಗ್ರಾಮದೇವತೆಗಳನ್ನು ಮೆರವಣಿಗೆಯಲ್ಲಿ ಕಿಲ್ಲಾ ಓಣಿಗೆ ಕಳಿಸಿಕೊಡಲಾಗುತ್ತದೆ. 27ರಂದು ಸೇವೆ ಸಲ್ಲಿಸಿದ ಭಕ್ತರು ಹಾಗೂ ಪದಾಧಿಕಾರಿಗಳನ್ನು ಸನ್ಮಾನಿಸಲಾಗುತ್ತದೆ. 28ರಂದು ರುದ್ರಾಭಿಷೇಕ, ಹೋಮ-ಹವನ ಹಾಗೂ ಮಹಾಪ್ರಸಾದ ನಡೆಯಲಿದೆ.

**-ಜಿ.ಬಿ. ಹಾವಣಗಿ,** ಶಿಕ್ಷಕರು

---

### ಹಾಲೆರೆಯಲು ದೇವಸ್ಥಾನಗಳಿಗೆ ಹರಿದುಬಂದ ಭಕ್ತರು

## ಶ್ರದ್ಧಾಭಕ್ತಿಯಿಂದ ನಾಗರ ಪಂಚಮಿ ಆಚರಣೆ

**ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ನಾಗರ ಪಂಚಮಿ ನಾಡಿಗೆ ದೊಡ್ಡದು ಎಂಬಂತೆ ಶ್ರಾವಣ ಮಾಸದ ನಾಗರ ಪಂಚಮಿ ಹಬ್ಬವನ್ನು ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಭಾನುವಾರ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಮಹಿಳೆಯರು, ಮಕ್ಕಳು ಹೊಸ ಬಟ್ಟೆ ಧರಿಸಿ ನಾಗದೇವರ ಮೂರ್ತಿಗಳಿಗೆ ಹಾಲೆರೆಯುವ ಮೂಲಕ ಪೂಜೆ ಸಲ್ಲಿಸಿ, ಕುಟುಂಬದ ಸುಖ, ಆರೋಗ್ಯ, ಐಶ್ವರ್ಯ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು. ಹಬ್ಬದ ಅಂಗವಾಗಿ ಬೆಳಗ್ಗೆಯಿಂದಲೇ ಮನೆಗಳ ಮುಂದೆ ನಾಗದೇವರ ರಂಗೋಲಿ ಬಿಡಿಸಿ ಪೂಜೆ ಸಲ್ಲಿಸಲಾಯಿತು. ಬಳಿಕ ಮಹಿಳೆಯರು ಹಾಗೂ ಮಕ್ಕಳು ಓಣಿಗಳಲ್ಲಿರುವ ಕಲ್ಲಿನ ನಾಗಮೂರ್ತಿಗಳಿಗೆ ಹಾಲು, ಹೂವು ಅರ್ಪಿಸಿ ಭಕ್ತಿ ಸಮರ್ಪಿಸಿದರು. ಮನೆಗಳಲ್ಲಿ ಉಂಡೆ, ಚಕ್ಕುಲಿ ಸೇರಿದಂತೆ ವಿವಿಧ ಸಾಂಪ್ರದಾಯಿಕ ತಿನಿಸುಗಳನ್ನು ತಯಾರಿಸಿ ನಾಗದೇವರಿಗೆ ನೈವೇದ್ಯ ಅರ್ಪಿಸಲಾಯಿತು. ಪಟ್ಟಣದ ಬಸ್ತಿಕೇರಿ, ಹಳ್ಳದಕೇರಿ, ಸೊಪ್ಪಿನಕೇರಿ, ಅಂಬೇಡ್ಕರ್ ನಗರ, ವಿನಾಯಕನಗರ, ಈಶ್ವರನಗರ, ಇಂದಿರಾನಗರ ಹಾಗೂ ನೂತನ ಬಡಾವಣೆಗಳಲ್ಲಿ ಮನೆಮನೆಗಳಲ್ಲಿ ಹಬ್ಬದ ಸಂಭ್ರಮ ಕಂಡುಬಂತು.

**ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ:** ಸವಣೂರು ರಸ್ತೆಯಲ್ಲಿರುವ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನದಲ್ಲಿ ನೂರಾರು ಮಹಿಳೆಯರು ಹಾಗೂ ಮಕ್ಕಳು ನಾಗದೇವರಿಗೆ ಹಾಲೆರೆಯುವ ಮೂಲಕ ವಿಶೇಷ ಪೂಜೆ ಸಲ್ಲಿಸಿದರು. ಬೆಳಗ್ಗೆಯಿಂದಲೇ ದೇವಸ್ಥಾನಕ್ಕೆ ಭಕ್ತರ ದಂಡೇ ಹರಿದುಬಂದಿತ್ತು. ಹಾಲು, ಹೂವು ಹಾಗೂ ವಿವಿಧ ನೈವೇದ್ಯ ಅರ್ಪಿಸಿ ಭಕ್ತರು ಪೂಜೆ ನೆರವೇರಿಸಿದರು. ಕೆಲವು ಕಡೆ ಮರಗಳಿಗೆ ಜೋಕಾಲಿ ಕಟ್ಟಿ ಮಹಿಳೆಯರು ಹಾಗೂ ಮಕ್ಕಳು ಸಂಭ್ರಮದಿಂದ ಜೋಕಾಲಿ ಆಡಿ ಹಬ್ಬ ಆಚರಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ಜಾನಪದ ಆಟಗಳು ಹಾಗೂ ವಿವಿಧ ಸಾಂಪ್ರದಾಯಿಕ ಆಚರಣೆಗಳು ಗಮನ ಸೆಳೆದವು. ಆದರೆ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಓಣಿಗಳಲ್ಲಿ ಜೋಕಾಲಿ ಕಟ್ಟುವ ಸಂಪ್ರದಾಯ ಕಡಿಮೆಯಾಗುತ್ತಿರುವುದು ಕಂಡುಬಂತು.

**ಮನೆಮನೆಗಳಲ್ಲಿ ಸಾಂಪ್ರದಾಯಿಕ ನೈವೇದ್ಯ:** ನಾಗರ ಪಂಚಮಿ ನಿಮಿತ್ತ ಮಹಿಳೆಯರು ಮನೆಗಳಲ್ಲಿ ವಿವಿಧ ಸಾಂಪ್ರದಾಯಿಕ ಖಾದ್ಯಗಳನ್ನು ತಯಾರಿಸಿ ನೈವೇದ್ಯ ಅರ್ಪಿಸಿದರು. ಕುಟುಂಬದ ಬಂಧುಬಳಗದ ಹೆಸರನ್ನು ಸ್ಮರಿಸಿ ನಾಗಮೂರ್ತಿಗೆ ಹಾಲೆರೆಯುವ ಮೂಲಕ ಕುಟುಂಬಕ್ಕೆ ಸುಖಸಂತೋಷ, ಆರೋಗ್ಯ ಹಾಗೂ ಸಮೃದ್ಧಿ ಕರುಣಿಸುವಂತೆ ಪ್ರಾರ್ಥಿಸಿದರು. ಕೆಲವೆಡೆ ಮಹಿಳೆಯರು ಮನೆಮನೆಗೆ ತೆರಳಿ ಪರಸ್ಪರ ರೊಟ್ಟಿ ಹಂಚಿಕೊಂಡು ಹಬ್ಬ ಆಚರಿಸಿದರು.

ಹಬ್ಬದ ಹಿನ್ನೆಲೆಯಲ್ಲಿ ಕಳೆದ ಮೂರುನಾಲ್ಕು ದಿನಗಳಿಂದಲೇ ಹೊಸ ಬಟ್ಟೆ, ದಿನಸಿ, ಹೂವು, ಹಣ್ಣು ಸೇರಿದಂತೆ ಅಗತ್ಯ ವಸ್ತುಗಳ ಖರೀದಿ ಭರಾಟೆ ಜೋರಾಗಿತ್ತು. ಇದರಿಂದ ಪಟ್ಟಣದ ಮಾರುಕಟ್ಟೆ ಪ್ರದೇಶಗಳಲ್ಲಿ ಜನಜಂಗುಳಿ ಕಂಡುಬಂತು.

---

## ಕರ್ನಾಟಕ ಟೆಲಿವಿಷನ್ ಅಸೋಸಿಯೇಷನ್ ಅಧ್ಯಕ್ಷರಾಗಿ ಗಣೇಶರಾವ್ ಕೇಸರಕರ್

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ಟೆಲಿವಿಷನ್ ಅಸೋಸಿಯೇಷನ್‌ನ ನೂತನ ಅಧ್ಯಕ್ಷರಾಗಿ ಚಲನಚಿತ್ರ, ನಟ ಗಣೇಶರಾವ್ ಕೇಸರಕರ್ ಬಹುಮತದಿಂದ ಆಯ್ಕೆಯಾಗಿದ್ದಾರೆ. ಸಂಘದ 25 ವರ್ಷಗಳ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಕಲಾವಿದರೊಬ್ಬರು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಪ್ರಧಾನ ಕಾರ್ಯದರ್ಶಿಯಾಗಿ ಡಿ.ಸಿ. ವೀರೇಂದ್ರ ಬೆಳ್ಳಿಚುಕ್ಕಿ ಆಯ್ಕೆಯಾಗಿದ್ದಾರೆ.

ಭಾಸ್ಕರ ಎನ್.ಎಸ್., ಸುನೀಲ್ ಪುರಾಣಿಕ, ರಾಮಸ್ವಾಮಿ ಗೌಡ, ರೇಣು ಶಿಕಾರಿ, ಪದ್ಮಾವಾಸಂತಿ, ವಿಕ್ರಂಸ ಊರಿ, ಸತ್ಯವಿಕಾಸ್ ಕೆ., ಸಾಗರ್ ಬಿ.ಕೆ., ಗುರುಮೂರ್ತಿ ಹೆಗ್ಡೆ, ಸಂಜೀವ ಸಿ.ಕೆ., ಗಿರೀಶ್ ಕೆ.ಟಿ., ಅಶೋಕ್ ಸುಲೇಗಾಯ್, ರಾಮು ಎಂ.ಎಸ್., ವ್ಯಾಸರಾಜ ಎಸ್.ವೈ., ವಿಠ್ಠಲ್ ಎನ್.ಎಂ., ಸಂದೇಶ್ ಎಚ್.ಸಿ., ತಿಮ್ಮರಾಜು ಟಿ., ವೆಂಕಟೇಶ ಡಿ. ಸೇರಿದಂತೆ ಒಟ್ಟು 21 ಮಂದಿ ವಿವಿಧ ವಲಯಗಳಿಂದ ಆಯ್ಕೆಯಾಗಿದ್ದಾರೆ.

ನಿರ್ಮಾಪಕರು, ನಿರ್ದೇಶಕರು, ಕಲಾವಿದರು, ಛಾಯಾಗ್ರಾಹಕರು, ಧ್ವನಿಗ್ರಾಹಕರು, ಸಂಕಲನಕಾರರು, ಪ್ರಸಾಧನಕಾರರು, ಕಲಾನಿರ್ದೇಶಕರು, ವಸ್ತ್ರವಿನ್ಯಾಸಕರು, ಬರಹಗಾರರು, ಸ್ಟುಡಿಯೋ ಹಾಗೂ ಯೂನಿಟ್ ಮಾಲೀಕರು, ಸಂಗೀತ, ನಿರ್ಮಾಣ, ಜಾಹೀರಾತು ಮತ್ತು ಸಹಾಯಕ ವಲಯಗಳ ಪ್ರತಿನಿಧಿಗಳು ನೂತನ ಆಡಳಿತ ಮಂಡಳಿಯಲ್ಲಿ ಸ್ಥಾನ ಪಡೆದಿದ್ದಾರೆ. ಮುಂದಿನ ಎರಡು ವರ್ಷಗಳ ಕಾಲ ಮಂಡಳಿ ಕಾರ್ಯನಿರ್ವಹಿಸಲಿದೆ ಎಂದು ಚುನಾವಣಾಧಿಕಾರಿ ಎನ್.ಓ. ಚಂದ್ರಶೇಖರ ತಿಳಿಸಿದ್ದಾರೆ.

ನೂತನ ಅಧ್ಯಕ್ಷ ಗಣೇಶರಾವ್ ಕೇಸರಕರ್ ಹಾಗೂ ಪದಾಧಿಕಾರಿಗಳ ಆಯ್ಕೆಗೆ ಸಿದ್ದನಕೊಳ್ಳದ ಕಲಾಪೋಷಕರ ಮಠದ ಶಿವಕುಮಾರ ಮಹಾಸ್ವಾಮಿಗಳು, ಹಿರಿಯ ಪತ್ರಕರ್ತ, ಸಾಹಿತಿ ಹಾಗೂ ನಿರ್ದೇಶಕ ಹಿರಿಯೂರು ರಾಘವೇಂದ್ರ, ಪತ್ರಿಕಾ ಸಂಪಾದಕ ಗಣಪತಿ ಗಂಗೊಳ್ಳಿ, ಚಲನಚಿತ್ರ ಪತ್ರಕರ್ತರಾದ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ನಿರ್ದೇಶಕ-ನಿರ್ಮಾಪಕರಾದ ಲೋಕೇಶ ವಿದ್ಯಾಧರ, ರೇಣುಕುಮಾರ ಸಂಸ್ಥಾನಮಠ ಹಾಗೂ ಸಂಗೀತ ಸಂಯೋಜಕ ರವೀಂದ್ರ, ರಾಮದುರ್ಗಕರ ಸೇರಿದಂತೆ ಹಲವರು ಅಭಿನಂದಿಸಿದ್ದಾರೆ.





---

## ಮಕ್ಕಳ ಕೈಗೆ ಮೊಬೈಲ್ ಕೊಡುವ ಮುನ್ನ ಎಚ್ಚರ




**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಮಕ್ಕಳಿಗೆ ಮೊಬೈಲ್ ನೀಡುವಾಗ ಪೋಷಕರು ಎಚ್ಚರಿಕೆ ವಹಿಸಿ, ಅವರ ಚಟುವಟಿಕೆಗಳ ಬಗ್ಗೆ ಗಮನ ಹರಿಸಬೇಕು ಎಂದು ಸಖಿ ಒನ್ ಸ್ಟಾಪ್ ಕೇಂದ್ರದ ಆಡಳಿತಾಧಿಕಾರಿ ಸುಜಾತ ಮಠಪತಿ ಹೇಳಿದರು. ದಾನಚಿಂತಾಮಣಿ ಅತ್ತಿಮಬ್ಬೆ ವಿವಿಧೋದ್ದೇಶಗಳ ಮಹಿಳಾ ಸಂಘದಿಂದ ಸ್ವಾಮಿ ವಿವೇಕಾನಂದ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಕಾನೂನು ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಕ್ಕಳಿಗೆ ಮನೆಯಲ್ಲಿ ಪೌಷ್ಟಿಕ ಆಹಾರ ನೀಡಬೇಕು. ದಾಂಪತ್ಯದಲ್ಲಿ ಮನಸ್ತಾಪ ಉಂಟಾದಾಗ ತಾಳ್ಮೆಯಿಂದ ವರ್ತಿಸಬೇಕು.

> ಮಹಿಳೆಯರು ಮೊಬೈಲ್, ಟಿ.ವಿ.ಯಲ್ಲಿ ಹೆಚ್ಚು ಸಮಯ ಕಳೆಯದೆ ಮಕ್ಕಳಿಗೆ ಸಮಯ ನೀಡಿ, ಅವರ ಚಟುವಟಿಕೆಗಳ ಬಗ್ಗೆ ಗಮನಹರಿಸಬೇಕು.
>
> **- ಸುಜಾತ ಮಠಪತಿ**

ದೌರ್ಜನ್ಯಕ್ಕೆ ಒಳಗಾದ ಮಹಿಳೆಯರು ಹಾಗೂ ಮಕ್ಕಳಿಗೆ ಸಖಿ ಒನ್ ಸ್ಟಾಪ್ ಕೇಂದ್ರದಿಂದ ವೈದ್ಯಕೀಯ ಚಿಕಿತ್ಸೆ, ಕಾನೂನು ನೆರವು, ಆಪ್ತ ಸಮಾಲೋಚನೆ, ಪೊಲೀಸ್ ನೆರವು ಹಾಗೂ ತಾತ್ಕಾಲಿಕ ವಸತಿ ಸೇರಿದಂತೆ ಐದು ಉಚಿತ ಸೌಲಭ್ಯಗಳು ದೊರೆಯುತ್ತವೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯೆ ವಕೀಲೆ ಮಂಜುಳಾ ಸ್ವಾಮಿ ಮಾತನಾಡಿ, ಮಹಿಳೆಯರು ಸಂವಿಧಾನ ಹಾಗೂ ತಮ್ಮ ಹಕ್ಕುಗಳ ಬಗ್ಗೆ ಅರಿವು ಹೊಂದಬೇಕು. ದೌರ್ಜನ್ಯಕ್ಕೊಳಗಾದವರು ಯಾವುದೇ ಭಯವಿಲ್ಲದೆ ಉಚಿತ ಕಾನೂನು ನೆರವು ಪಡೆಯಬೇಕು ಎಂದು ಸಲಹೆ ನೀಡಿದರು.

ಸಂಘದ ಅಧ್ಯಕ್ಷೆ ಲಲಿತಾ ಗೌಡರ, ಶಾಂತಮ್ಮ ನಂದಪ್ಪನವರ, ಮಮತಾಜ ಬೇಗಂ ನದಾಫ ಹಲವರು ಉಪಸ್ಥಿತರಿದ್ದರು. ಶಿಕ್ಷಕಿ ದ್ರಾಕ್ಷಾಯಿಣಿ ರಾಯಣ್ಣವರ ನಿರೂಪಿಸಿ ವಂದಿಸಿದರು.

---

## ರಂಭಾಪುರಿ ಪೀಠದ ದಾಸೋಹಕ್ಕೆ ಅಗತ್ಯ ದಿನಸಿ ವಸ್ತುಗಳ ರವಾನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರಾವಣ ಮಾಸದ ಅಂಗವಾಗಿ ಬಾಳೆಹೊನ್ನೂರಿನ ರಂಭಾಪುರಿ ಪೀಠದಲ್ಲಿ ನಡೆಯುತ್ತಿರುವ ಇಷ್ಟಲಿಂಗ ಮಹಾಪೂಜೆ ಹಾಗೂ ದಾಸೋಹ ಕಾರ್ಯಕ್ರಮಕ್ಕೆ ಗದುಗಿನ ಭಕ್ತರು ಭಾನುವಾರ ಭಾರಿ ಪ್ರಮಾಣದ ದವಸಧಾನ್ಯ ಹಾಗೂ ದಿನಸಿ ವಸ್ತುಗಳನ್ನು ದೇಣಿಗೆಯಾಗಿ ನೀಡಿದರು.

ಶ್ರೀಮದ್ ರಂಭಾಪುರಿ ಪೀಠದ ಜಗದ್ಗುರು ಡಾ. ವೀರ ಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳವರ ನೇತೃತ್ವದಲ್ಲಿ ಲೋಕಕಲ್ಯಾಣಾರ್ಥ ನಡೆಯುತ್ತಿರುವ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮಕ್ಕೆ ರಾಜ್ಯದ ವಿವಿಧೆಡೆಯಿಂದ ಭಕ್ತರು ಆಗಮಿಸುತ್ತಿದ್ದಾರೆ. ಪ್ರತಿದಿನ ನಡೆಯುವ




ದಾಸೋಹಕ್ಕೆ ಅಗತ್ಯವಾದ ಆಹಾರ ಸಾಮಗ್ರಿಗಳನ್ನು ಪೂರೈಸುವ ಉದ್ದೇಶದಿಂದ ಗದುಗಿನ ಭಕ್ತರು ದೇಣಿಗೆ ಸಂಗ್ರಹಿಸಿದ್ದಾರೆ.

ಸಕ್ಕರೆ, ರವಾ, ತೊಗರಿಬೇಳೆ, ಕಡ್ಲೆಬೇಳೆ, ಬೆಲ್ಲ, ಅಡುಗೆ ಎಣ್ಣೆ, ಖಾರದ ಪುಡಿ ಹಾಗೂ ಕಾಯಿಪಲ್ಯ ಸೇರಿದಂತೆ ವಿವಿಧ ದಿನಸಿ ವಸ್ತುಗಳನ್ನು ಗದಗದ ಮಾಂಗಲ್ಯ ಮಂದಿರದಿಂದ ಲಾರಿಯಲ್ಲಿ ರಂಭಾಪುರಿ ಪೀಠಕ್ಕೆ ರವಾನಿಸಲಾಯಿತು.ಈ ಸಂದರ್ಭದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಮಾಂಗಲ್ಯ ಮಂದಿರ ಟ್ರಸ್ಟ್ ಕಾರ್ಯಾಧ್ಯಕ್ಷ ಅಜ್ಜಣ್ಣ ಮಲ್ಲಾಡದ, ಕಾರ್ಯದರ್ಶಿ ಚಂದ್ರು ಬಾಳಿಹಳ್ಳಿಮಠ, ಕೋಶಾಧ್ಯಕ್ಷ ರಾಜಣ್ಣ ಮಲ್ಲಾಡದ, ಮಂಜುನಾಥ ಬೇಲೇರಿ, ರಮೇಶ ಶಿಗ್ಲಿ, ರಾಜಣ್ಣ ಮುಧೋಳ ಸೇರಿದಂತೆ ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

---

### ಗದಗ ಜಿಲ್ಲೆಯ 28 ಪ್ರಕರಣಗಳಿಗೆ ಸಮಾಧಾನ ಸಮಾರೋಹ ಅವಕಾಶ

## ಮನೆ ಬಾಗಿಲಿಗೆ ಬಂದ ಸುಪ್ರೀಂ ಕೋರ್ಟ್ ನ್ಯಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ದೀರ್ಘಕಾಲದಿಂದ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ವ್ಯಾಜ್ಯಗಳಿಗೆ ಸೌಹಾರ್ದಯುತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸುಪ್ರೀಂ ಕೋರ್ಟ್ ಆರಂಭಿಸಿರುವ ಸಮಾಧಾನ ಸಮಾರೋಹ ಕಾರ್ಯಕ್ರಮದಡಿ ಗದಗ ಜಿಲ್ಲೆಯ 28 ಪ್ರಕರಣಗಳನ್ನು ಆಯ್ಕೆ ಮಾಡಲಾಗಿದೆ.

ಜಿಲ್ಲೆಯ ವಿವಿಧ ನ್ಯಾಯಾಲಯಗಳಿಂದ ಮೇಲ್ಮನವಿ ಹಂತದಲ್ಲಿ ಸುಪ್ರೀಂ ಕೋರ್ಟ್‌ಗೆ ತೆರಳಿರುವ ಈ ಪ್ರಕರಣಗಳನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಕಳುಹಿಸಲಾಗಿದೆ. ಪ್ರಕರಣಗಳ ಪಕ್ಷಕಾರರಿಗೆ ನೋಟಿಸ್ ನೀಡಿ, ಪೂರ್ವ-ಸಮನ್ವಯ ಸಭೆಗಳ ಮೂಲಕ ರಾಜಿ ಸಂಧಾನಕ್ಕೆ ಪ್ರಯತ್ನಿಸಲಾಗುತ್ತಿದೆ.

ಈ ಪ್ರಕರಣಗಳ ಪಕ್ಷಕಾರರು ಆಗಸ್ಟ್ 21, 22 ಮತ್ತು 23ರಂದು ನಡೆಯುವ ವಿಶೇಷ ಲೋಕ ಅದಾಲತ್‌ನಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಬಹುದಾಗಿದೆ. ಇದರಿಂದ ಸುಪ್ರೀಂ ಕೋರ್ಟ್ ಪ್ರಕರಣಗಳಿಗಾಗಿ ದೆಹಲಿಗೆ ತೆರಳುವ ಅಗತ್ಯವಿಲ್ಲದೆ ಗದಗದಲ್ಲಿಯೇ ಕುಳಿತು ವಿವಾದ ಇತ್ಯರ್ಥಪಡಿಸಿಕೊಳ್ಳುವ ಅವಕಾಶ ದೊರೆಯಲಿದೆ.

ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥವಾದರೆ ಎರಡೂ ಪಕ್ಷಗಳಿಗೂ ಒಪ್ಪಿಗೆಯಾಗುವ ಪರಿಹಾರ ದೊರೆಯುವುದರ ಜೊತೆಗೆ, ಸಮಯ ಮತ್ತು ಹಣದ ಉಳಿತಾಯವಾಗಲಿದೆ. ಕೆಲವು ಪ್ರಕರಣಗಳಲ್ಲಿ ಪಾವತಿಸಿರುವ ಕೋರ್ಟ್ ಶುಲ್ಕವನ್ನು ಮರುಪಡೆಯುವ ಅವಕಾಶವೂ ಇದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಆಯ್ಕೆಯಾಗಿರುವ ಪ್ರಕರಣಗಳ ಪಕ್ಷಕಾರರನ್ನು ಸಂಪರ್ಕಿಸಿ, ನೋಟಿಸ್ ಜಾರಿ ಹಾಗೂ ಪೂರ್ವ-ಸಮನ್ವಯ ಸಭೆಗಳ ಮೂಲಕ ಸಂಧಾನಕ್ಕೆ ಪೂರಕ ವಾತಾವರಣ ನಿರ್ಮಿಸುತ್ತಿದೆ.

ಸಮಾಧಾನ ಸಮಾರೋಹ ಯೋಜನೆ ವ್ಯಾಜ್ಯಗಳನ್ನು ಶೀಘ್ರ ಹಾಗೂ ಸೌಹಾರ್ದಯುತವಾಗಿ ಇತ್ಯರ್ಥಪಡಿ ಸಿಕೊಳ್ಳಲು ಉತ್ತಮ ಅವಕಾಶವಾಗಿದೆ.

ಆಯ್ಕೆಯಾಗಿರುವ ಪ್ರಕರಣಗಳ ಪಕ್ಷಕಾರರು ಇದರ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ನಾಗವೇಣಿ ತಿಳಿಸಿದ್ದಾರೆ.

ಪಕ್ಷಕಾರರು ನೋಟಿಸ್‌ಗೆ ಸ್ಪಂದಿಸಿ ಪೂರ್ವ-ಸಮನ್ವಯ ಸಭೆ ಹಾಗೂ ವಿಶೇಷ ಲೋಕ ಅದಾಲತ್‌ನಲ್ಲಿ ಭಾಗವಹಿಸಬೇಕು. ಕಡಿಮೆ ಸಮಯ ಮತ್ತು ವೆಚ್ಚದಲ್ಲಿ ವ್ಯಾಜ್ಯ ಇತ್ಯರ್ಥಪಡಿಸಿಕೊಳ್ಳಲು ಇದು ಉತ್ತಮ ಅವಕಾಶ ಎಂದು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮನವಿ ಮಾಡಿದ್ದಾರೆ.

ನ್ಯಾಯಾಲಯದ ತೀರ್ಪಿನಲ್ಲಿ ಒಬ್ಬರು ಗೆದ್ದು ಮತ್ತೊಬ್ಬರು ಸೋಲುವ ಸಾಧ್ಯತೆ ಇರುತ್ತದೆ. ಆದರೆ ರಾಜಿ ಸಂಧಾನದ ಮೂಲಕ ಎರಡೂ ಪಕ್ಷಗಳಿಗೆ ಒಪ್ಪಿಗೆಯಾಗುವ ಪರಿಹಾರ ಕಂಡುಕೊಳ್ಳಬಹುದು. ಹೀಗಾಗಿ ದೀರ್ಘಕಾಲದ ವ್ಯಾಜ್ಯಗಳಿಗೆ ಅಂತ್ಯ ಹಾಡಿ, ಸಂಬಂಧಗಳನ್ನೂ ಉಳಿಸಿಕೊಳ್ಳಲು ಸಮಾಧಾನ ಸಮಾರೋಹ ಸಹಕಾರಿಯಾಗಲಿದೆ.

---

## ಗುಲಾಬಿ ಚಿತ್ರದ ಮೊದಲ ಪೋಸ್ಟರ್ ಬಿಡುಗಡೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಾವಿತ್ರಿ ರಾಮಚಂದ್ರ ಬ್ಯಾನರ್‌ನಡಿ ನಿರ್ಮಾಣವಾಗಿರುವ ಡಾ. ಆರ್. ವಿಜಯಕುಮಾರ್ ನಟಿಸಿ, ನಿರ್ದೇಶಿಸಿರುವ ಗುಲಾಬಿ ಕನ್ನಡ ಚಲನಚಿತ್ರದ ಮೊದಲ ಪೋಸ್ಟರ್ ಬೆಂಗಳೂರಿನ ಕೆ.ಜಿ. ರಸ್ತೆಯ ಸ್ವಪ್ನ ಚಿತ್ರಮಂದಿರದಲ್ಲಿ ಅದ್ಧೂರಿಯಾಗಿ ಬಿಡುಗಡೆಗೊಂಡಿತು.

ರಕ್ಷಕ-2 ಚಿತ್ರದ 50ನೇ ದಿನದ ಸಂಭ್ರಮದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಗುಲಾಬಿ ಚಿತ್ರದ ಪೋಸ್ಟರ್ ಅನ್ನು ಚಿತ್ರರಂಗದ ನಟ-ನಟಿಯರು, ತಂತ್ರಜ್ಞರು ಹಾಗೂ ಪ್ರೇಕ್ಷಕರ ಸಮ್ಮುಖದಲ್ಲಿ ಅನಾವರಣಗೊಳಿಸಲಾಯಿತು. ಸ್ವಪ್ನ ಚಿತ್ರಮಂದಿರದ ಮಾಲೀಕ ಮನೋಹರ ಹಾಗೂ ಸಿಬ್ಬಂದಿ ಚಿತ್ರತಂಡಕ್ಕೆ ಶುಭ ಹಾರೈಸಿದರು.

ಗುಲಾಬಿ ಡಾ. ವಿಜಯಕುಮಾರ್ ಅವರ ನಾಲ್ಕನೇ ಚಿತ್ರವಾಗಿದ್ದು, ಪ್ಯಾನ್ ಇಂಡಿಯಾ ಮಟ್ಟದಲ್ಲಿ ನಿರ್ಮಾಣ ಹಾಗೂ ನಿರ್ದೇಶನ ಮಾಡಲಾಗಿದೆ. ಬೆಂಗಳೂರು ಸುತ್ತಮುತ್ತ, ತಾತಗುಣಿ, ಭೂಮಿಕಾ ಸ್ಟುಡಿಯೋ ಹಾಗೂ ಕನಕಪುರ ಸುತ್ತಮುತ್ತ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ಚಿತ್ರದಲ್ಲಿ ಆರು ಹಾಡುಗಳು




ಹಾಗೂ ಆರು ಸಾಹಸ ದೃಶ್ಯಗಳಿದ್ದು, ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ಚಿತ್ರವನ್ನು ಬಿಡುಗಡೆ ಮಾಡಲು ಚಿತ್ರತಂಡ ಸಿದ್ಧತೆ ನಡೆಸಿದೆ. ನಿರ್ದೇಶಕ ಡಾ. ವಿಜಯಕುಮಾರ್ ಮಾತನಾಡಿ, ತಮ್ಮ ಹಿಂದಿನ ಚಿತ್ರಗಳು 50 ದಿನ ಹಾಗೂ ಶತದಿನೋತ್ಸವ ಆಚರಿಸಲು ಪ್ರೇಕ್ಷಕರ ಪ್ರೋತ್ಸಾಹವೇ ಕಾರಣ. ಗುಲಾಬಿ ಚಿತ್ರಕ್ಕೂ ಪ್ರೇಕ್ಷಕರು ಇದೇ ರೀತಿಯ ಬೆಂಬಲ ನೀಡುವ ವಿಶ್ವಾಸವಿದೆ ಎಂದರು. ಚಿತ್ರದಲ್ಲಿ ಡಾ. ವಿಜಯಕುಮಾರ್, ರಾಧಿಕಾ, ಚಂದನಾ, ಅನಿತಾಶ್ರೀ, ನಾಗೇಂ ದ್ರ ಅರಸ್, ಲಯಕೋಕಿಲ, ಉಗ್ರಂ ರವಿ, ಬಿಗ್‌ಬಾಸ್ ಮಲ್ಲಮ್ಮ, ಸುರೇಂದ್ರ ಕುರ್ಮಾ, ಅಜಿತ್ ಜೈನ್, ಲೋಕೇಶ್ ಸೇರಿದಂತೆ ಹಲವರು ನಟಿಸಿದ್ದಾರೆ.

ವೀರೇಶ್ ಛಾಯಾಗ್ರಹಣ, ಸಂತೋಷ್ ಜೋಶಿ ಸಂಗೀತ, ನಾಗೇಶ್ ಪ್ರಸಾಧನ, ಬಾಲಕೃಷ್ಣ ನೃತ್ಯ ಸಂಯೋಜನೆ,ಗುಲಾಬಿ ಚಿನ್ನಯ್ಯ ಸಾಹಸ ನಿರ್ದೇಶನ ಹಾಗೂ ನಿಸಿತ್ ಸಂಕಲನದ ಜವಾಬ್ದಾರಿ ನಿರ್ವಹಿಸಿ ದ್ದಾರೆ. ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ್ ಹಂಡಿಗಿ ಪಿಆರ್‌ಓ ಆಗಿ, ವಾಸುದೇವ ಶೆಟ್ಟಿ ಎಚ್.ಎಸ್. ಸಹಾಯಕ ನಿರ್ದೇಶಕರಾಗಿ ಹಾಗೂ ಎಸ್. ಮೇಘರಾಜ ಗೌಡ ಸಹನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದಾರೆ.

ನಿರ್ಮಾಣ ಉಸ್ತುವಾರಿ ಮತ್ತು ವಸ್ತ್ರವಿನ್ಯಾಸವನ್ನು ಅನಿತಾಶ್ರೀ ನಿರ್ವಹಿಸಿದ್ದಾರೆ. ಕಥೆ, ಚಿತ್ರಕಥೆ, ಸಂಭಾಷಣೆ, ನಿರ್ದೇಶನ ಹಾಗೂ ನಿರ್ಮಾಣದ ಹೊಣೆಯನ್ನು ಡಾ. ವಿಜಯಕುಮಾರ್ ವಹಿಸಿಕೊಂಡಿದ್ದಾರೆ. ಅವರು ಈ ಹಿಂದೆ ದೊಡ್ಡಣ್ಣ, ಪುಟ್ಟಣ್ಣ, ರಕ್ಷಕ ಹಾಗೂ ರಕ್ಷಕ-2 ಚಿತ್ರಗಳನ್ನು ನಿರ್ಮಿಸಿ, ನಿರ್ದೇಶಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

## ಮೈಸೂರು ದಸರಾ ಗಜಪಡೆಯಿಂದ ಕ್ಯಾಪ್ಟನ್ ಅಭಿಮನ್ಯು ಔಟ್



**ವಿಜಯಸಾಕ್ಷಿ ಸುದ್ದಿ, ಮೈಸೂರು**

ಮೈಸೂರು ದಸರಾ ವೈಭವಕ್ಕೆ ವರ್ಷಗಳ ಕಾಲ ರಾಜಗಾಂಭೀರ್ಯ ತುಂಬಿದ್ದ ಅಭಿಮನ್ಯು ಈ ಬಾರಿ ಗಜಪಡೆಯ ಭಾಗವಾಗುವುದಿಲ್ಲ. 60 ವರ್ಷ ವಯಸ್ಸಿನ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಅಭಿಮನ್ಯುವನ್ನು ದಸರಾ ಆನೆಗಳ ಪಟ್ಟಿಯಿಂದ ಕೈಬಿಟ್ಟಿದ್ದು, ಸತತ ಆರು ಬಾರಿ ಚಿನ್ನದ ಅಂಬಾರಿ ಹೊತ್ತ ಗಜರಾಜನ ದಸರಾ ಕರ್ತವ್ಯಕ್ಕೆ ಅಂತ್ಯ ಹಾಡಿದೆ.

ಚಿನ್ನದ ಅಂಬಾರಿ ಹೊತ್ತು ಮೈಸೂರು ರಾಜಬೀದಿಯಲ್ಲಿ ಹೆಜ್ಜೆ ಹಾಕುತ್ತಿದ್ದ ಅಭಿಮನ್ಯುವಿನ ಗಾಂಭೀರ್ಯ ದಸರಾ ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಿತ್ತು. ಆರು ಬಾರಿ ಅಂಬಾರಿ ಹೊತ್ತಿದ್ದ ಈ ಗಜರಾಜನಿಗೆ ಮೈಸೂರು ಜನರಲ್ಲೂ ಅಪಾರ ಅಭಿಮಾನವಿದೆ. ಆದರೆ ವಯಸ್ಸಿನ ಕಾರಣದಿಂದ ಈ ಬಾರಿ ಅಭಿಮನ್ಯುವಿಗೆ ದಸರಾ ಕರ್ತವ್ಯದಿಂದ ವಿಶ್ರಾಂತಿ ನೀಡಲಾಗಿದೆ.

ಅಭಿಮನ್ಯುವಿನ ಖ್ಯಾತಿ ಅಂಬಾರಿ ಹೊರುವುದಕ್ಕೆ ಮಾತ್ರ ಸೀಮಿತವಾಗಿರಲಿಲ್ಲ. ಕಾಡಾನೆ ಸೆರೆ ಕಾರ್ಯಾಚರಣೆಗಳಲ್ಲಿ ಪರಿಣತಿ ಹೊಂದಿದ್ದ ಆತ ಕೂಂಬಿಂಗ್ ಸ್ಪೆಷಲಿಸ್ಟ್ ಎಂದೇ ಗುರುತಿಸಿಕೊಂಡಿದ್ದ. ಅಪಾಯಕಾರಿ ಕಾಡಾನೆಗಳನ್ನು ನಿಯಂತ್ರಿಸುವ ಕಾರ್ಯಾಚರಣೆಗಳಲ್ಲಿ ಅರಣ್ಯ ಇಲಾಖೆಯ ಪ್ರಮುಖ ಆನೆಗಳಲ್ಲಿ ಒಂದಾಗಿದ್ದ.

ಅಭಿಮನ್ಯುವಿನ ಸ್ಥಾನವನ್ನು ಸದ್ಯ ಖಾಲಿ ಇಡಲಾಗಿದ್ದು, ಭೀಮ ಮತ್ತು ಹರ್ಷ ಆನೆಗಳನ್ನು ಮೀಸಲು ಆನೆಗಳಾಗಿ ಇರಿಸಲಾಗಿದೆ. ದಸರಾ ಗಜಪಡೆಯ ಮೊದಲ ಹಂತದಲ್ಲಿ ಧನಂಜಯ, ಮಹೇಂದ್ರ, ಏಕಲವ್ಯ, ಪ್ರಶಾಂತ, ಗೋಪಿ, ಶ್ರೀರಾಮ, ಸುಗ್ರೀವ, ಲಕ್ಷ್ಮೀ ಹಾಗೂ ಕಾವೇರಿ ಆಗಮಿಸಲಿವೆ. ಎರಡನೇ ಹಂತದಲ್ಲಿ ರೂಪ, ಚೈತ್ರ ಹಾಗೂ ಶ್ರೀಕಂಠ ಗಜಪಡೆ ಸೇರಲಿವೆ.


ಅಭಿಮನ್ಯು ಈ ಬಾರಿ ಚಿನ್ನದ ಅಂಬಾರಿ ಹೊತ್ತು ಮೆರವಣಿಗೆಯಲ್ಲಿ ಸಾಗದಿದ್ದರೂ, ಮೈಸೂರು ದಸರಾ ಇತಿಹಾಸದಲ್ಲಿ ಆತನ ಸ್ಥಾನ ಅಳಿಸಲಾಗದು. ಅಂಬಾರಿಯ ಭಾರ ಹೊತ್ತು ರಾಜಬೀದಿಯಲ್ಲಿ ಹೆಜ್ಜೆ ಹಾಕಿದ ಆ ಗಜರಾಜನ ನೆನಪು ಮಾತ್ರ ಮೈಸೂರು ಜನರ ಮನದಲ್ಲಿ ಎಂದಿಗೂ ಉಳಿಯಲಿದೆ.

## ಕೆ.ಆರ್. ಪುರಂ ತ್ರಿವಳಿ ಕೊಲೆ ಪ್ರಕರಣಕ್ಕೆ ಬಿಗ್ ಟ್ವಿಸ್ಟ್

### ಲವ್ವರ್ ಕೆನತ್ ವಿರುದ್ಧ ಮಾಫಿ ಸಾಕ್ಷಿಯಾಗಲು ಶ್ವೇತಾ ಸಿದ್ಧ!

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕೆ.ಆರ್. ಪುರಂ ತ್ರಿವಳಿ ಕೊಲೆ ಪ್ರಕರಣದಲ್ಲಿ ಮಹತ್ವದ ತಿರುವು ಸಿಕ್ಕಿದೆ. ಪ್ರಕರಣದ ಪ್ರಮುಖ ಆರೋಪಿ ಶ್ವೇತಾ ಇದೀಗ ತನ್ನ ಲವ್ವರ್ ಕೆನತ್ ವಿರುದ್ಧವೇ



ಸಾಕ್ಷಿ ಹೇಳಲು ಮುಂದೆ ಬಂದಿದ್ದು, ಮಾಫಿ ಸಾಕ್ಷಿ ಅಥವಾ ಅಪ್ರೂವರ್ ಆಗಲು ಅವಕಾಶ ನೀಡುವಂತೆ 29ನೇ ಎಸಿಜೆಎಂ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ.

ತಾನು ಕೊಲೆ ನಡೆದ ಸಂದರ್ಭದಲ್ಲಿ ಸ್ಥಳದಲ್ಲಿದ್ದೆ ಎಂದು ಒಪ್ಪಿಕೊಂಡಿರುವ ಶ್ವೇತಾ, ಕೊಲೆ ಮಾಡುವ ನಿರ್ಧಾರ ಕೆನತ್‌ನದ್ದಾಗಿತ್ತು ಮತ್ತು ನೇರವಾಗಿ ಕೊಲೆ ಮಾಡಿದ್ದು ಆತನೇ ಎಂದು ಅರ್ಜಿಯಲ್ಲಿ ತಿಳಿಸಿದ್ದಾರೆ. ಆದರೆ ತಾನು ಯಾರಿಗೂ ಚಾಕುವಿನಿಂದ ಇರಿದಿಲ್ಲ ಹಾಗೂ ನೇರವಾಗಿ ಕೊಲೆ ಮಾಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಕೆನತ್ ವಿರುದ್ಧ ಮಾಫಿ ಸಾಕ್ಷಿಯಾಗಿ ಹೇಳಿಕೆ ನೀಡಲು ತಾನು ಸಿದ್ಧಳಿದ್ದು, ಪ್ರಕರಣದಲ್ಲಿ ತನ್ನನ್ನು ಅಪ್ರೂವರ್ ಆಗಿ ಪರಿಗಣಿಸಬೇಕು ಎಂದು ಶ್ವೇತಾ ನ್ಯಾಯಾಲಯಕ್ಕೆ ಮನವಿ ಮಾಡಿದ್ದಾರೆ.ಆದರೆ ಶ್ವೇತಾ ಅರ್ಜಿಯನ್ನು ನ್ಯಾಯಾಲಯ ಸದ್ಯಕ್ಕೆ ಪರಿಗಣಿಸಿಲ್ಲ. ಪ್ರಕರಣದ ತನಿಖೆ ಇನ್ನೂ ಪೂರ್ಣಗೊಂಡಿಲ್ಲ ಎಂದು ಪೊಲೀಸರು ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಕೆಲವು ಫೊರೆನ್ಸಿಕ್ ವರದಿಗಳು ಬರಬೇಕಿದ್ದು, ಅವು ಲಭ್ಯವಾದ ಬಳಿಕ ಚಾರ್ಜ್‌ಶೀಟ್ ಸಲ್ಲಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.ಈ ಹಿನ್ನೆಲೆಯಲ್ಲಿ ಚಾರ್ಜ್‌ಶೀಟ್ ಸಲ್ಲಿಕೆಯಾದ ಬಳಿಕ ಮಾಫಿ ಸಾಕ್ಷಿಯಾಗಲು ಮತ್ತೆ ಅರ್ಜಿ ಸಲ್ಲಿಸುವಂತೆ ನ್ಯಾಯಾಲಯ ಸೂಚಿಸಿದೆ. ಹೀಗಾಗಿ ಶ್ವೇತಾ ಸಲ್ಲಿಸಿದ್ದ ಅರ್ಜಿಯನ್ನು ಸದ್ಯಕ್ಕೆ ಇತ್ಯರ್ಥಪಡಿಸಿರುವ ಕೋರ್ಟ್, ಮುಂದಿನ ಹಂತದಲ್ಲಿ ಮತ್ತೆ ಅರ್ಜಿ ಸಲ್ಲಿಸಲು ಅವಕಾಶ ನೀಡಿದೆ.

### ನಗರೋತ್ಥಾನ-4 ಕಾಮಗಾರಿ ಕಳಪೆ ಆರೋಪ | ಗುತ್ತಿಗೆದಾರನಿಗೆ ಬಿಲ್ ಕೊಡಬೇಡಿ, ಕಪ್ಪುಪಟ್ಟಿಗೆ ಸೇರಿಸಿ


# ಚರಂಡಿ ಕಾಮಗಾರಿಗೆ ₹50 ಲಕ್ಷ?

**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ನಗರೋತ್ಥಾನ ಹಂತ-4 ಯೋಜನೆಯಡಿ ವಾರ್ಡ್ ನಂ.7ರಲ್ಲಿ ಕೈಗೊಂಡಿರುವ ಚರಂಡಿ ನಿರ್ಮಾಣ ಕಾಮಗಾರಿ ಕಳಪೆ ಹಾಗೂ ಅರ್ಧಂಬರ್ಧವಾಗಿದ್ದು, ಸಾರ್ವಜನಿಕರು ನಿತ್ಯ ತೊಂದರೆ ಅನುಭವಿಸುವಂತಾಗಿದೆ ಎಂದು ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ ಆರೋಪಿಸಿದ್ದಾರೆ.

ವಾರ್ಡ್‌ನ ಉಮನಾಬಾದಿ ಮನೆಯಿಂದ ಮಾಳೋದೆಯವರ ಮಾರ್ಗವಾಗಿ ಕನ್ಯಾಳ ಅಗಸಿವರೆಗೆ ಹಾಗೂ ಟೆಂಗಿನಕಾಯಿ ಬಜಾರ್‌ನ ಪುಣೇಕರ ಮನೆಯಿಂದ ಬೆಟಗೇರಿ ಬಸ್ ನಿಲ್ದಾಣದವರೆಗೆ ಚರಂಡಿ ನಿರ್ಮಾಣಕ್ಕೆ ಯೋಜನೆಯಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಆದರೆ ಕೆ.ವಿ.ಆರ್. ಕನ್‌ಸ್ಟ್ರಕ್ಷನ್ ಸಂಸ್ಥೆ ನಿಗದಿತ ಸ್ಥಳಗಳ ಬದಲಿಗೆ ಕೆಲವೇ ಭಾಗಗಳಲ್ಲಿ ಕಾಮಗಾರಿ ನಡೆಸಿ, ಉಳಿದ ಕಡೆ ಕಾಮಗಾರಿ ಅಪೂರ್ಣವಾಗಿ ಬಿಟ್ಟಿದೆ ಎಂದು ಅವರು ದೂರಿದ್ದಾರೆ. ನಿರ್ಮಿಸಿರುವ ಚರಂಡಿಗಳ ಮೇಲೂ ಸಾರ್ವಜನಿಕರ ಸಂಚಾರಕ್ಕೆ ಅಗತ್ಯವಾದ ಸಿ.ಡಿ.ಗಳನ್ನು ಅಳವಡಿಸಿಲ್ಲ. ಪರಿಣಾಮ ಜನರು ಚರಂಡಿ ದಾಟಲು ಪರದಾಡುವಂತಾಗಿದೆ. ಅಲ್ಲದೆ, ಕಾಮಗಾರಿಯಲ್ಲಿ ಗುಣಮಟ್ಟದ ಸಾಮಗ್ರಿ ಬಳಸದೇ, ಅಗತ್ಯ ಪೈಪ್‌ಗಳನ್ನು ಅಳವಡಿಸದ ಕಾರಣ ನೀರು ಸರಾಗವಾಗಿ ಹರಿಯದೆ ಕೊಳಚೆ ನೀರು ಸಂಗ್ರಹವಾಗುತ್ತಿದೆ. ಇದರಿಂದ ದುರ್ವಾಸನೆ ಹಾಗೂ ಅನಾರೋಗ್ಯಕರ ವಾತಾವರಣ ನಿರ್ಮಾಣವಾಗಿದೆ ಎಂದು ಯಳವತ್ತಿ ಹೇಳಿದ್ದಾರೆ.







**ನಾಲ್ಕು ಬಾರಿ ಮನವಿ; ಸ್ಥಳ ಪರಿಶೀಲನೆಯಾದರೂ ಪರಿಹಾರವಿಲ್ಲ**

ಸಮಸ್ಯೆ ಕುರಿತು ಜಿಲ್ಲಾಧಿಕಾರಿಗಳಿಗೆ ಮೂರು-ನಾಲ್ಕು ಬಾರಿ ಲಿಖಿತ ಮನವಿ ಸಲ್ಲಿಸಲಾಗಿದೆ. ಬಳಿಕ ಜಿಲ್ಲಾ ಯೋಜನಾ ನಿರ್ದೇಶಕರು, ಮುಖ್ಯ ಕಾರ್ಯಪಾಲಕ ಅಭಿಯಂತರರು, ನಗರಸಭೆ ಪೌರಾಯುಕ್ತರು, ಅಭಿಯಂತರರು ಹಾಗೂ ಗುತ್ತಿಗೆ ಸಂಸ್ಥೆಯ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಆಲಿಸಿದ್ದಾರೆ. ಆದರೆ ಸಮಸ್ಯೆ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಂಡಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗುತ್ತಿಗೆ ಸಂಸ್ಥೆಯು ಕಾಮಗಾರಿಗೆ ಸಂಬಂಧಿಸಿದ ನಿಗದಿತ ಮಾನದಂಡಗಳನ್ನು ಪಾಲಿಸದೆ ವಿಳಂಬ ಮಾಡುತ್ತಿದೆ. ಸಮರ್ಪಕ ಯಂತ್ರೋಪಕರಣ ಮತ್ತು ಕಾರ್ಮಿಕರ ಕೊರತೆಯ ನೆಪದಲ್ಲಿ ಕಾಮಗಾರಿ ಮುಂದೂಡಲಾಗುತ್ತಿದೆ. ಅಲ್ಲದೆ, ಮೂಲ ಗುತ್ತಿಗೆ ಸಂಸ್ಥೆ ಸ್ಥಳೀಯ ಸಬ್‌ಕಾಂಟ್ರಾಕ್ಟರ್‌ಗಳಿಗೆ ಕಾಮಗಾರಿ ವಹಿಸಿರುವುದರಿಂದ ಗುಣಮಟ್ಟ ಹಾಗೂ ಕಾಮಗಾರಿ ಪೂರ್ಣಗೊಳಿಸುವಿಕೆಯಲ್ಲಿ ಮತ್ತಷ್ಟು ಸಮಸ್ಯೆಯಾಗಿದೆ ಎಂದು ಆರೋಪಿಸಿದ್ದಾರೆ.

**₹50 ಲಕ್ಷದ ಕಾಮಗಾರಿ; ಪೂರ್ಣಗೊಂಡಿದ್ದು ಎಷ್ಟು?**

ವಾರ್ಡ್ ನಂ.7ರಲ್ಲಿ ಚರಂಡಿ ನಿರ್ಮಾಣಕ್ಕೆ ಸುಮಾರು ₹50 ಲಕ್ಷ ಅನುದಾನ ನಿಗದಿಯಾಗಿದ್ದು, ಈವರೆಗೆ ಅಂದಾಜು ₹20 ಲಕ್ಷದಷ್ಟು ಮಾತ್ರ ಕಾಮಗಾರಿ ನಡೆದಿದೆ. ಉಳಿದ ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ ಎಂದು ಯಳವತ್ತಿ ಆರೋಪಿಸಿದ್ದಾರೆ.

> ಸಾರ್ವಜನಿಕರಿಗೆ ನಿತ್ಯ ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೆ.ವಿ.ಆರ್. ಕನ್‌ಸ್ಟ್ರಕ್ಷನ್ ಸಂಸ್ಥೆಯ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಕಳಪೆ ಹಾಗೂ ಅಪೂರ್ಣ ಕಾಮಗಾರಿಗೆ ಬಿಲ್ ಪಾವತಿಸಬಾರದು. ಸಂಸ್ಥೆಯನ್ನು ಕಪ್ಪುಪಟ್ಟಿಗೆ ಸೇರಿಸಿ, ಉಳಿದ ಅನುದಾನದಲ್ಲಿ ಅಗತ್ಯವಿರುವ ಕಡೆ ಸಮರ್ಪಕ ಚರಂಡಿ ಕಾಮಗಾರಿ ಪೂರ್ಣಗೊಳಿಸಬೇಕು.
>
> **- ರಾಘವೇಂದ್ರ ಯಳವತ್ತಿ,** ನಗರಸಭೆ ಸದಸ್ಯ

ಅಂದಾಜು ಪತ್ರಿಕೆ ಸಿದ್ಧಪಡಿಸುವ ಸಂದರ್ಭದಲ್ಲಿ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸದೆ ಕಚೇರಿಯಲ್ಲಿ ಕುಳಿತು ಅಂದಾಜು ರೂಪಿಸಿರುವುದರಿಂದ ಸಮಸ್ಯೆ ಎದುರಾಗಿದೆ. ವಾರ್ಡ್‌ನ ವಿವಿಧ ಭಾಗಗಳಲ್ಲಿ ಅಗತ್ಯವಿರುವ ಕಾಮಗಾರಿಗಳ ಸ್ಥಳಗಳನ್ನು ತಿಳಿಸಿದ್ದರೂ ಕೆಲವು ಪ್ರದೇಶಗಳನ್ನು ಅಂದಾಜು ಪತ್ರಿಕೆಯಲ್ಲಿ ಸೇರಿಸಿಲ್ಲ ಎಂದು ಅವರು ದೂರಿದ್ದಾರೆ. ಕಾಮಗಾರಿ ವಿಳಂಬ ಹಾಗೂ ಕಳಪೆ ಗುಣಮಟ್ಟದ ಕುರಿತು ಅಧಿಕಾರಿಗಳ ಗಮನಕ್ಕೆ ಹಲವು ಬಾರಿ ತಂದರೂ ಯಾವುದೇ ಶಾಶ್ವತ ಪರಿಹಾರ ದೊರೆತಿಲ್ಲ. ಗದಗ-ಬೆಟಗೇರಿ ನಗರಸಭೆಯ ಇತರ ವಾರ್ಡ್‌ಗಳಲ್ಲಿಯೂ ಇದೇ ಸಂಸ್ಥೆಯ ಕಾಮಗಾರಿಗಳ ಬಗ್ಗೆ ದೂರುಗಳಿವೆ ಎಂದು ಆರೋಪಿಸಿರುವ ಯಳವತ್ತಿ, ಜಿಲ್ಲಾಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

### ಶಿಕ್ಷಕರ ಮಾರ್ಗದರ್ಶನದ ಜತೆಗೆ ಮನೆಯಲ್ಲಿ ಉತ್ತಮ ಕಲಿಕಾ ವಾತಾವರಣ ಅಗತ್ಯ

## ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೋಷಕರ ಸಹಕಾರವೇ ಬಲ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯಲ್ಲಿ ಶಿಕ್ಷಕರಷ್ಟೇ ಪೋಷಕರ ಪಾತ್ರವೂ ಮಹತ್ವದ್ದಾಗಿದೆ. ಪೋಷಕರ ಸಹಕಾರ, ಸೂಕ್ತ ಮಾರ್ಗದರ್ಶನ ಹಾಗೂ ಮಕ್ಕಳ ಕಲಿಕೆಯತ್ತ ನಿರಂತರ ಗಮನ ಹರಿಸುವುದರಿಂದ ಅವರಲ್ಲಿ ಕಲಿಕೆಯ ಆಸಕ್ತಿ ಮೂಡಿಸಿ ಉತ್ತಮ ಸಾಧನೆಗೆ ಪ್ರೇರೇಪಿಸಬಹುದು ಎಂದು ಶ್ರೀ ಅನ್ನದಾನೇಶ್ವರ ಸಂಸ್ಥೆಯ ಸ್ಥಾನಿಕ ಆಡಳಿತ ಮಂಡಳಿ ಸದಸ್ಯ ಎಚ್.ಎಸ್. ಕೊಪ್ಪದ ಹೇಳಿದರು. ಸಮೀಪದ ನಿಡಗುಂದಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ 2026-27ನೇ ಸಾಲಿನ ಶೈಕ್ಷಣಿಕ ವರ್ಷದ ಪೋಷಕರ ಹಾಗೂ ತಾಯಂದಿರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಮಕ್ಕಳಿಗೆ ಯಾವುದೇ ಕೊರತೆಯಾಗದಂತೆ ಸಂಸ್ಥೆಯ ಪೀಠಾಧಿಪತಿಗಳು ಆಧುನಿಕ ತಂತ್ರಜ್ಞಾನ ಸೇರಿದಂತೆ ಅಗತ್ಯ ಮೂಲಸೌಕರ್ಯ ಹಾಗೂ ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸುತ್ತಿದ್ದಾರೆ.

ವಿದ್ಯಾರ್ಥಿಗಳು ದೊರೆಯುತ್ತಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು.

ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶಾಲೆಯ ಪ್ರಯತ್ನವೊಂದೇ ಸಾಲದು. ಪೋಷಕರು ಮಕ್ಕಳ ಕಲಿಕೆಯ ಬಗ್ಗೆ ನಿರಂತರ ಗಮನ ಹರಿಸಿ, ಶಿಕ್ಷಕರೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸಿದಾಗ ಉತ್ತಮ ಫಲಿತಾಂಶ ಸಾಧ್ಯ. ಮಕ್ಕಳಿಗೆ ಮನೆಯಲ್ಲಿ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸುವುದು ಅತ್ಯಗತ್ಯ ಎಂದು ಎಚ್.ಎಸ್. ಕೊಪ್ಪದ ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿಕ್ಷಕ ಎಸ್.ವಿ. ಹಳ್ಳಿಕೇರಿ, ಶಿಕ್ಷಣ ವ್ಯವಸ್ಥೆ ವೇಗವಾಗಿ ಬದಲಾಗುತ್ತಿದ್ದು, ಅದಕ್ಕೆ ತಕ್ಕಂತೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುವ ಅಗತ್ಯವಿದೆ. ಮಕ್ಕಳ ಕಲಿಕಾ ಪ್ರಗತಿಯಲ್ಲಿ ಪೋಷಕರ ನಿರಂತರ ಗಮನ, ಶಿಕ್ಷಕರ ಮಾರ್ಗದರ್ಶನ ಹಾಗೂ ಮನೆಯಲ್ಲಿ ಉತ್ತಮ ಶೈಕ್ಷಣಿಕ ವಾತಾವರಣ ಪ್ರಮುಖ ಪಾತ್ರ ವಹಿಸುತ್ತದೆ ಎಂದರು. ಮುಖ್ಯ ಶಿಕ್ಷಕ ಎಂ.ಬಿ. ಕೊಪ್ಪದ ಮಾತನಾಡಿ, ಇಲಾಖಾ ಮಟ್ಟದಲ್ಲಿ ಚರ್ಚೆಯಾಗುತ್ತಿರುವ ಶೈಕ್ಷಣಿಕ ಬೆಳವಣಿಗೆಗಳು ಹಾಗೂ ಮೌಲ್ಯಮಾಪನ ಪದ್ಧತಿಯಲ್ಲಿನ ಸಂಭವನೀಯ ಬದಲಾವಣೆಗಳ ಕುರಿತು ಮಾಹಿತಿ ನೀಡಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಶಿಕ್ಷಕರು ಮತ್ತು ಪೋಷಕರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಮಕ್ಕಳಿಗೆ ನಿರಂತರ ಪ್ರೋತ್ಸಾಹ ನೀಡುವ ಮೂಲಕ ಉತ್ತಮ ಫಲಿತಾಂಶ ಗಳಿಸಲು ಉತ್ತೇಜಿಸಬೇಕು ಎಂದರು.

ಸಭೆಯಲ್ಲಿ ತಾಯಂದಿರ ಪ್ರತಿನಿಧಿಗಳಾದ ಶಿವಕುಮಾರಿ ಧರಣೆಪ್ಪಗೌಡ್ರ, ವಾಣಿ ಅಣಗೌಡ್ರ, ಶಭಾನ ನದಾಫ್, ಸುಜಾತಾ ಕಮ್ಮಾರ ಸೇರಿದಂತೆ ಹಲವರು ಮಕ್ಕಳ ಕಲಿಕಾ ಪ್ರಗತಿ ಕುರಿತು ಮುಕ್ತವಾಗಿ ಚರ್ಚಿಸಿ, ವಿದ್ಯಾರ್ಥಿಗಳ ಕಲಿಕೆಯನ್ನು ಮತ್ತಷ್ಟು ಪರಿಣಾಮಕಾರಿಗೊಳಿಸಲು ಕೈಗೊಳ್ಳಬೇಕಾದ ಚಟುವಟಿಕೆಗಳು ಹಾಗೂ ಯೋಜನೆಗಳ ಕುರಿತು ಸಲಹೆ-ಅಭಿಪ್ರಾಯಗಳನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಎಸ್.ಬಿ. ಹಿರೇಮಠ, ಬಿ.ಪಿ. ಕಾಗಿ, ಕುಮಾರಿ ಪೂಜಾ ಅಂಗಡಿ, ಈರಣ್ಣ ಅರಮನಿ, ಕುಮಾರ್ ಚೇತನ ಭೂಸನೂರಮಠ ಸೇರಿದಂತೆ ಶಿಕ್ಷಕ ವೃಂದ ಉಪಸ್ಥಿತರಿದ್ದರು.

ಶಿಕ್ಷಕ ಗೋಪಾಲ ಗೋಂದಳೆ ಸ್ವಾಗತಿಸಿದರು. ಎಚ್.ಬಿ. ಕಟ್ಟಿಮನಿ ನಿರೂಪಿಸಿದರು. ಶಿಕ್ಷಕಿ ನಂದಾ ಮೆಣಸಗಿ ವಂದಿಸಿದರು.

## ವಿಜೃಂಭಣೆಯಿಂದ ನಡೆದ ಶ್ರೀ ಚಂಗಳಾದೇವಿ ಮೂರ್ತಿ ಮೆರವಣಿಗೆ





**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಶ್ರಾವಣ ಮಾಸದ ಪ್ರಯುಕ್ತ ಬೆಟಗೇರಿ ವಾರ್ಡ್ ನಂ.7ರ ಹೆಳವಿ ಓಣಿಯ ಆರಾಧ್ಯ ದೈವ ಶ್ರೀ ಚಂಗಳಾದೇವಿ ಮೂರ್ತಿ ಮೆರವಣಿಗೆ ಸೋಮವಾರ ವಿಜೃಂಭಣೆಯಿಂದ ನಡೆಯಿತು.

ಶ್ರೀ ಚಂಗಳಾದೇವಿ ಮೂರ್ತಿಗೆ ಬಣ್ಣ ಹಚ್ಚಿಸಿ ವಿಶೇಷ ಅಲಂಕಾರ ಮಾಡಲಾಗಿತ್ತು. ಬಳಿಕ 101 ಪೂರ್ಣಕುಂಭ ಹಾಗೂ ವಿವಿಧ ವಾದ್ಯಮೇಳಗಳೊಂದಿಗೆ ಕನ್ಯಾಳ ಅಗಸಿಯ ದೂಳಿಕಟ್ಟಿ ಶ್ರೀ ಮಾರುತಿ ದೇವಸ್ಥಾನದಿಂದ ಮಧ್ಯಾಹ್ನ 12.30ಕ್ಕೆ ಮೆರವಣಿಗೆ ಆರಂಭವಾಯಿತು.

ಮೆರವಣಿಗೆಯು ಗಾರ್ಗಿಪೇಟೆ, ಒಕ್ಕಲಗೇರಿ ಓಣಿ, ಕುರಹಟ್ಟಿಪೇಟೆ, ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ, ಶ್ರೀ ವೀರಭದ್ರೇಶ್ವರ ದೇವಸ್ಥಾನ ಹಾಗೂ ಬೇಲೇರಿ ಓಣಿ ಮಾರ್ಗವಾಗಿ ಸಾಗಿ ಮರಳಿ ಹೆಳವಿ ಓಣಿಯ ದೈವದ ಮನೆಗೆ ತಲುಪಿ ಮುಕ್ತಾಯಗೊಂಡಿತು. ಮೆರವಣಿಗೆಯುದ್ದಕ್ಕೂ ಭಕ್ತರು ಶ್ರದ್ಧಾಭಕ್ತಿಯಿಂದ ಪಾಲ್ಗೊಂಡು ದೇವಿಯ ದರ್ಶನ ಪಡೆದು ಪೂಜೆ ಸಲ್ಲಿಸಿದರು. ಓಣಿಯ ಮಹಿಳೆಯರು, ಯುವಕರು ಹಾಗೂ ಮಕ್ಕಳು ಸೇರಿದಂತೆ ನೂರಾರು ಜನರು ಸಂಭ್ರಮದಿಂದ ಪಾಲ್ಗೊಂಡಿದ್ದರು.

ಕಾರ್ಯಕ್ರಮದ ಅಂಗವಾಗಿ ಸಂಜೆ, ಮೆರವಣಿಗೆ ಹಾಗೂ ಧಾರ್ಮಿಕ ಕಾರ್ಯಕ್ರಮಕ್ಕೆ ತನು-ಮನ-ಧನದಿಂದ ಸಹಕಾರ ನೀಡಿದ ದಾನಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮಕ್ಕೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಹಾಗೂ ವಾರ್ಡ್ ನಂ.7ರ ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ ವಿಶೇಷ ಅತಿಥಿಗಳಾಗಿ ಆಗಮಿಸಿದ್ದರು.

ಓಣಿಯ ಗುರು-ಹಿರಿಯರು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಒಬ್ಬರ ಹೆಸರಲ್ಲಿ 9ಕ್ಕಿಂತ ಹೆಚ್ಚು ಸಿಮ್ ಇರೋದಿಲ್ಲ!

### ಹೊಸ ನಿಯಮದಲ್ಲಿ ರಿಯಲ್ ಟೈಮ್ ವೆರಿಫಿಕೇಷನ್ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಅಹಮದಾಬಾದ್‌ನಲ್ಲಿ ನಡೆದ ₹1.5 ಕೋಟಿ ಮೊತ್ತದ ಟಿಬಾಸ್ ಸ್ಕ್ಯಾಮ್ ಪ್ರಕರಣದ ತನಿಖೆ ನಡೆಸುತ್ತಿರುವ ಪೊಲೀಸರಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾರೀ ಸೈಬರ್ ಅಪರಾಧ ಜಾಲವೊಂದು ಪತ್ತೆಯಾಗಿದೆ.


ಸೈಬರ್ ಅಪರಾಧಗಳಿಗೆ ಬಳಸಲಾಗುತ್ತಿದ್ದ ಸುಮಾರು 4,500 ಸಿಮ್ ಕಾರ್ಡ್‌ಗಳನ್ನು ಪೊಲೀಸರು ಪತ್ತೆಹಚ್ಚಿದ್ದು, ಈ ಜಾಲಕ್ಕೆ ಚೀನಾ ಮತ್ತು ಪಾಕಿಸ್ತಾನದೊಂದಿಗೆ ಸಂಪರ್ಕವಿರುವ ಶಂಕೆ ವ್ಯಕ್ತವಾಗಿದೆ.

ಈ ಬೆನ್ನಲ್ಲೇ ದೇಶದಾದ್ಯಂತ ಸಿಮ್ ಕಾರ್ಡ್‌ಗಳನ್ನು ಖರೀದಿಸುವ ಪ್ರಕ್ರಿಯೆಯನ್ನು ಕೇಂದ್ರ ಸರ್ಕಾರ ಮತ್ತಷ್ಟು ಬಿಗಿಗೊಳಿಸಿದೆ. ಸೈಬರ್ ವಂಚನೆ ತಡೆಯುವ ಸಲುವಾಗಿ ಹೊಸ ಸಿಮ್ ಕಾರ್ಡ್‌ಗಳ ವಿತರಣಾ ಪ್ರಕ್ರಿಯೆಯನ್ನು ಬಿಗಿಗೊಳಿಸಿರುವ ಕೇಂದ್ರ, ನಕಲಿ ಸಿಮ್‌ಗಳು, ಸೈಬರ್ ವಂಚನೆ ಹಾಗೂ ಡಿಜಿಟಲ್ ಅರೆಸ್ಟ್ ಪ್ರಕರಣಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಸಿಮ್ ವಿತರಿಸುವ ಮುನ್ನ ಗ್ರಾಹಕರ ಮಾಹಿತಿಯನ್ನು ರಿಯಲ್‌ಟೈಮ್‌ನಲ್ಲಿ ಪರಿಶೀಲಿಸುವುದನ್ನು ಕಡ್ಡಾಯಗೊಳಿಸಿದೆ.

ಟೆಲಿಕಾಂ ಕಂಪನಿಗಳು ಗ್ರಾಹಕರ ವಿವರಗಳನ್ನು ಡಿಜಿಟಲ್ ಇಂಟೆಲಿಜೆನ್ಸ್ ಪ್ಲಾಟ್‌ಫಾರ್ಮ್ ಮೂಲಕ ಪರಿಶೀಲಿಸಬೇಕಿದ್ದು, ಅನುಮಾನಾಸ್ಪದ ಅಥವಾ ನಕಲಿ ಗುರುತಿನ ದಾಖಲೆಗಳನ್ನು ಹೊಂದಿರುವ ವ್ಯಕ್ತಿಗಳಿಗೆ ಹೊಸ ಸಿಮ್ ಸಂಪರ್ಕ ನೀಡುವುದನ್ನು ತಡೆಯಲಾಗುತ್ತದೆ. ಇದಲ್ಲದೆ, ಒಬ್ಬ ವ್ಯಕ್ತಿಯ ಹೆಸರಿನಲ್ಲಿ ಎಷ್ಟು ಸಿಮ್ ಕಾರ್ಡ್‌ಗಳು ನೋಂದಣಿಯಾಗಿವೆ ಎಂಬುದನ್ನು ಸರ್ಕಾರದ ಮಟ್ಟದಲ್ಲಿ ಟ್ರ್ಯಾಕ್ ಮಾಡಲಾಗುತ್ತದೆ.

ಸಾಮಾನ್ಯವಾಗಿ ಒಬ್ಬ ವ್ಯಕ್ತಿಗೆ ಗರಿಷ್ಠ 9 ಸಿಮ್ ಕಾರ್ಡ್‌ಗಳನ್ನು ಹೊಂದಲು ಅವಕಾಶವಿದ್ದು, ಜಮ್ಮು-ಕಾಶ್ಮೀರ, ಅಸ್ಸಾಂ ಹಾಗೂ ಈಶಾನ್ಯ ರಾಜ್ಯಗಳಲ್ಲಿ ಈ ಮಿತಿ ಗರಿಷ್ಠ 6 ಸಿಮ್ ಕಾರ್ಡ್‌ಗಳಿಗೆ ಸೀಮಿತವಾಗಿರಲಿದೆ.

ನಕಲಿ ಗುರುತಿನ ಆಧಾರದ ಮೇಲೆ ಸಿಮ್ ಕಾರ್ಡ್ ಪಡೆಯುವುದು, ಸೈಬರ್ ವಂಚನೆ ನಡೆಸುವುದು ಹಾಗೂ ಡಿಜಿಟಲ್ ಅರೆಸ್ಟ್‌ನಂತಹ ವಂಚನೆಗಳಿಗೆ ಬಳಸಲಾಗುವ ನಕಲಿ ಸಂಪರ್ಕಗಳನ್ನು ನಿಯಂತ್ರಿಸುವುದೇ ಈ ಕ್ರಮದ ಪ್ರಮುಖ ಉದ್ದೇಶವಾಗಿದೆ.



**ಹೊಸ ಸಿಮ್ ಕಾರ್ಡ್ ಖರೀದಿಗೆ ಟಫ್ ರೂಲ್ಸ್**

1. ಹೊಸ ಸಿಮ್ ಕಾರ್ಡ್ ನೀಡುವ ಮೊದಲು ರಿಯಲ್‌ಟೈಮ್ ಪರಿಶೀಲನೆ ಕಡ್ಡಾಯ
2. ಡಿಜಿಟಲ್ ಇಂಟೆಲಿಜೆನ್ಸ್ ಪ್ಲಾಟ್‌ಫಾರ್ಮ್ ಮೂಲಕ ಗ್ರಾಹಕರ ವಿವರ ಪರಿಶೀಲನೆ
3. ನಕಲಿ ಗುರುತಿನ ವ್ಯಕ್ತಿಗಳಿಗೆ ಸಿಮ್ ನಿರ್ಬಂಧ
4. ವ್ಯಕ್ತಿಯ ಹೆಸರಿನ ಸಿಮ್ ಸಂಖ್ಯೆ ಸರ್ಕಾರದಿಂದ ಟ್ರ್ಯಾಕಿಂಗ್
5. ಗರಿಷ್ಠ 9 ಸಿಮ್ (ಜೆಕೆ, ಈಶಾನ್ಯ ರಾಜ್ಯಗಳಲ್ಲಿ 6 ಸಿಮ್ ಮಿತಿ)

## ಪಡಿತರಕ್ಕಾಗಿ ಕೆಲಸ ಬಿಟ್ಟು ಕ್ಯೂನಲ್ಲಿ ನಿಲ್ಲಬೇಕು



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪಡಿತರ ಚೀಟಿದಾರರ ಅರ್ಹತೆ ಪರಿಶೀಲನೆಗಾಗಿ ಸರ್ಕಾರ ಜಾರಿಗೆ ತಂದಿರುವ ಹೊಸ KYC ವ್ಯವಸ್ಥೆಯ ತಾಂತ್ರಿಕ ಸಮಸ್ಯೆಗಳು ಫಲಾನುಭವಿಗಳ ದಿನನಿತ್ಯದ ಬದುಕನ್ನೇ ಅಸ್ತವ್ಯಸ್ತಗೊಳಿಸಿವೆ. ಕುಟುಂಬದ ಎಲ್ಲ ಸದಸ್ಯರ ಬಯೋಮೆಟ್ರಿಕ್, OTP ಸೇರಿದಂತೆ ಹಲವು ಹಂತಗಳ ಪ್ರಕ್ರಿಯೆ ಪೂರ್ಣಗೊಳಿಸಬೇಕಿರುವುದರಿಂದ ನ್ಯಾಯಬೆಲೆ ಅಂಗಡಿಗಳ ಮುಂದೆ ಉದ್ದನೆಯ ಸರತಿ ಸಾಲುಗಳು ಕಂಡುಬರುತ್ತಿವೆ.

ಪಡಿತರ ವಿತರಣೆಯಲ್ಲಿ ಅನರ್ಹರನ್ನು ಪತ್ತೆಹಚ್ಚಿ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲು ಸರ್ಕಾರ ತಂತ್ರಾಂಶವನ್ನು ಬಲಪಡಿಸಿದೆ. ಆದರೆ ಸರ್ವರ್ ಸಾಮರ್ಥ್ಯ ಮತ್ತು ತಾಂತ್ರಿಕ ದೋಷಗಳಿಂದಾಗಿ KYC ಪೂರ್ಣಗೊಳಿಸುವುದೇ ಫಲಾನುಭವಿಗಳಿಗೆ ದೊಡ್ಡ ಸವಾಲಾಗಿದೆ.

ಕುಟುಂಬದ ಪ್ರತಿಯೊಬ್ಬ ಸದಸ್ಯರು ನ್ಯಾಯಬೆಲೆ ಅಂಗಡಿಗೆ ಹಾಜರಾಗಿ ಹೆಬ್ಬೆರಳಿನ ಗುರುತು ನೀಡಬೇಕು. ಬಳಿಕ ಮೊಬೈಲ್‌ಗೆ ಬರುವ OTPಯನ್ನು ತಂತ್ರಾಂಶದಲ್ಲಿ ನಮೂದಿಸಬೇಕು. OTP ಬರಲು ವಿಳಂಬವಾದರೆ ಅಥವಾ ನಮೂದಿಸುವ ವೇಳೆಗೆ ಅದರ ಅವಧಿ ಮುಗಿದರೆ ಮತ್ತೆ ಮೊದಲಿನಿಂದಲೇ ಪ್ರಕ್ರಿಯೆ ಆರಂಭಿಸಬೇಕಾಗುತ್ತದೆ.

ಹೀಗಾಗಿ ಒಂದೇ ಕುಟುಂಬದ KYC ಪೂರ್ಣಗೊಳಿಸಲು ಹಲವು ಗಂಟೆಗಳು ಬೇಕಾಗುತ್ತಿವೆ. ಏಳೆಂಟು ಸದಸ್ಯರಿರುವ ಕುಟುಂಬಗಳ ಪರಿಸ್ಥಿತಿ ಇನ್ನಷ್ಟು ಕಷ್ಟಕರವಾಗಿದೆ. ಸರ್ವರ್ ಸಮಸ್ಯೆಯಿಂದ ಕೆಲವೊಮ್ಮೆ ಇಡೀ ದಿನ ಕಾದರೂ ಇಬ್ಬರು-ಮೂವರು ಸದಸ್ಯರ KYC ಮಾತ್ರ ಪೂರ್ಣಗೊಳ್ಳುತ್ತಿದೆ ಎಂಬ ಆರೋಪ ಫಲಾನುಭವಿಗಳಿಂದ ಕೇಳಿಬರುತ್ತಿದೆ.

ಇದರ ಹೊಡೆತ ನೇರವಾಗಿ ದಿನಗೂಲಿ ಕಾರ್ಮಿಕರ ಮೇಲೆ ಬಿದ್ದಿದೆ. ಕೂಲಿ ಕೆಲಸಕ್ಕೆ ತೆರಳಿದರೆ ಮಾತ್ರ ಆ ದಿನದ ಆದಾಯ ಸಿಗುವ ಕುಟುಂಬಗಳು, ಪಡಿತರ ಪಡೆಯಲು ಕೆಲಸವನ್ನೇ ಬಿಟ್ಟು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಲ್ಲಬೇಕಾಗಿದೆ. ಒಂದು ದಿನದ ಕೂಲಿ ತಪ್ಪಿದರೆ ಕುಟುಂಬದ ಆಹಾರಕ್ಕೂ ಸಮಸ್ಯೆಯಾಗುವ ಸ್ಥಿತಿ ನಿರ್ಮಾಣವಾಗಿದೆ.

ವೃದ್ಧರು ಕೂಡ ಗಂಟೆಗಟ್ಟಲೆ ಕ್ಯೂನಲ್ಲಿ ನಿಲ್ಲಬೇಕಾಗಿದ್ದು, ಬಿಸಿಲಿನಲ್ಲಿ ಕೆಲವರು ಅಸ್ವಸ್ಥರಾಗುತ್ತಿರುವ ಘಟನೆಗಳು ನಡೆಯುತ್ತಿವೆ. ಇಂತಹ ಸಂದರ್ಭಗಳಲ್ಲಿ ಅಂಗಡಿ ಮಾಲೀಕರು ಹಾಗೂ ಸ್ಥಳೀಯರೇ ನೆರವಿಗೆ ಧಾವಿಸುತ್ತಿದ್ದಾರೆ.


ತಾಂತ್ರಿಕ ಸಮಸ್ಯೆ ಬಗ್ಗೆ ಅಧಿಕಾರಿಗಳ ಗಮನಕ್ಕೆ ತಂದರೂ ಸರ್ವರ್ ಸಮಸ್ಯೆಯ ಕಾರಣ ನೀಡಲಾಗುತ್ತಿದೆ. ಆದರೆ ಪರಿಹಾರ ಸಿಗದೆ ಜನರ ಸಂಕಷ್ಟ ಮುಂದುವರಿದಿದೆ. ಅರ್ಹ ಫಲಾನುಭವಿಗಳಿಗೆ ಪಡಿತರ ಪಡೆಯುವುದೇ ಕಷ್ಟವಾಗದಂತೆ KYC ವ್ಯವಸ್ಥೆಯನ್ನು ತಕ್ಷಣ ಸರಿಪಡಿಸಿ, ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂಬ ಆಗ್ರಹ ಇದೀಗ ಬಲಗೊಂಡಿದೆ.

## ಬಿಜೆಪಿ ರಾಷ್ಟ್ರೀಯ ಉಪಾಧ್ಯಕ ನಾಗರಾಜರಿಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷರಾಗಿ ಆಯ್ಕೆಯಾದ ರಾಜ್ಯಸಭಾ ಸದಸ್ಯ ಡಾ. ಮಾ. ನಾಗರಾಜ ಅವರನ್ನು ಗದಗದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಇತ್ತೀಚೆಗೆ ಬಿಜೆಪಿ ವತಿಯಿಂದ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾಗಿರುವ ಡಾ. ಮಾ. ನಾಗರಾಜ ಅವರಿಗೆ ಪಕ್ಷವು ರಾಷ್ಟ್ರೀಯ ಉಪಾಧ್ಯಕ್ಷರಾಗಿ ಮತ್ತೊಂದು ಮಹತ್ವದ ಜವಾಬ್ದಾರಿ ನೀಡಿರುವ ಹಿನ್ನೆಲೆಯಲ್ಲಿ ಅವರ ನಿವಾಸದಲ್ಲಿ ಸನ್ಮಾನ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾ ಪ್ರಕೋಷ್ಠಗಳ ಸಹ ಸಂಯೋಜಕ ರಮೇಶ ಎನ್. ಸಜ್ಜಗಾರ, ಬಿಜೆಪಿ ಗದಗ ಜಿಲ್ಲಾ ಕಾನೂನು ಪ್ರಕೋಷ್ಠದ ಸಂಚಾಲಕ ಕೆ.ಪಿ. ಕೋಟಿಗೌಡ್ರ, ಅಶೋಕ ಒಡೆಯರ, ಕೇಶವ ವಿ.ಬಿ. ಸೇರಿದಂತೆ ಹಲವರು ಉಪಸ್ಥಿತರಿದ್ದು, ಡಾ. ಮಾ. ನಾಗರಾಜ ಅವರನ್ನು ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು.

ಹೊಸ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಿ ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ತುಂಬಲಿ ಎಂದು ಶುಭ ಹಾರೈಸಿದರು.



## ಬಿಎಂಟಿಸಿ ಬಸ್ ಬಿಡಿಭಾಗ ಖರೀದಿ ಅಕ್ರಮ: 8 ಜನ ಅಮಾನತು

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬಿಎಂಟಿಸಿ ಬಸ್‌ನ ಬಿಡಿ ಭಾಗಗಳ ಖರೀದಿಯಲ್ಲಿ ಅಕ್ರಮವಾಗಿದ್ದು, ಇದರ ತನಿಖೆಗೆ ಸಮಿತಿ ರಚನೆ ಮಾಡಲಾಗಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.


ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದ ವೇಳೆ ಕಾಂಗ್ರೆಸ್ ಸದಸ್ಯ ಡಾ.ಗೋವಿಂದ್ ರಾಜ್ ಈ ಬಗ್ಗೆ ಪ್ರಶ್ನೆ ಕೇಳಿದ್ದರು.

ಬಿಎಂಟಿಸಿ ಬಸ್ ಬಿಡಿ ಭಾಗ ಖರೀದಿಯಲ್ಲಿ ಅಕ್ರಮವಾಗಿದ್ದು, ಎಷ್ಟು ಹಣ ಅಕ್ರಮವಾಗಿದೆ, ಅಕ್ರಮ ತನಿಖೆಗೆ ಸಮಿತಿ ರಚನೆಯಾಗಿದೆಯೇ, ಅಕ್ರಮದಲ್ಲಿ ಭಾಗಿಯಾದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ಹಾಗೂ ನಕಲಿ ಬಿಲ್ ಸೃಷ್ಟಿಸಿ ಅಕ್ರಮ ಎಸಗಿದ ಗುತ್ತಿಗೆದಾರರ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಲಾಗಿದೆಯೇ ಎಂದು ಪ್ರಶ್ನಿಸಿದ್ದರು. ಇದಕ್ಕೆ ಉತ್ತರ ನೀಡಿದ ಸಚಿವ ಬೈರತಿ ಸುರೇಶ್, ಅಕ್ರಮದ ಬಗ್ಗೆ ಮಾಹಿತಿ ಸ್ವೀಕಾರವಾದ ಬೆನ್ನಲ್ಲೇ ಮಾರ್ಚ್ 27ರಂದು 5 ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ ಎಂದು ತಿಳಿಸಿದರು. ಸಮಿತಿ ನೀಡಿದ ಪ್ರಾಥಮಿಕ ವರದಿ ಅನ್ವಯ 8 ಜನ ಅಧಿಕಾರಿ, ಸಿಬ್ಬಂದಿಗಳನ್ನು ಅಮಾನತು ಮಾಡಲಾಗಿದೆ ಎಂದ ಅವರು, ತನಿಖಾ ಸಮಿತಿ ಅಕ್ಟೋಬರ್ ಅಂತ್ಯದವರೆಗೆ ಅಂತಿಮ ವರದಿ ನೀಡಲಿದ್ದು, ವರದಿ ಬಳಿಕ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ಸಂಕ್ಷಿಪ್ತ ಸುದ್ದಿಗಳು

# ಉದ್ದೇಶಕ್ಕೆ ಬಳಕೆಯಾಗದ ಭೂಮಿ ವಾಪಸ್: ಡಿಸಿಎಂ ಪರಮೇಶ್ವರ್ ಸ್ಪಷ್ಟನೆ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ಶಿಕ್ಷಣ ಸಂಸ್ಥೆಗಳು, ಸಂಘ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳಿಗೆ ಸರ್ಕಾರ ಕೊಟ್ಟಿರುವ ಭೂಮಿಯನ್ನು ನಿಗದಿತ ಉದ್ದೇಶಕ್ಕೆ ಬಳಕೆ ಮಾಡದೇ ಹೋದರೆ ಸರ್ಕಾರ ಅದನ್ನು ಮರುವಶಪಡಿಸಿಕೊಳ್ಳಲಿದೆ ಎಂದು ಡಿಸಿಎಂ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್‌ನ ಶಿವಕುಮಾರ್ ಪ್ರಶ್ನೆ ಕೇಳಿದ್ದರು. ಸಂಘ ಸಂಸ್ಥೆಗಳಿಗೆ, ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರ ಭೂಮಿ ನೀಡುತ್ತಿದ್ದು, ಅವರು ಯಾವ ಉದ್ದೇಶಕ್ಕೆ ಭೂಮಿ ಪಡೆದಿದ್ದರೋ ಅದಕ್ಕೆ ಬಳಕೆ ಮಾಡುತ್ತಿಲ್ಲ ಎಂದು ಆಕ್ಷೇಪಿಸಿದ ಅವರು, ಧಾರ್ಮಿಕ ಸಂಘಗಳಿಗೆ ಸರ್ಕಾರ ಭೂಮಿ ನೀಡಬಾರದು ಎಂದು ಒತ್ತಾಯಿಸಿದರು.

ಇದಕ್ಕೆ ಉತ್ತರ ನೀಡಿದ ಡಿಸಿಎಂ ಪರಮೇಶ್ವರ್, ಸಂಘ ಸಂಸ್ಥೆಗಳಿಗೆ, ಶಿಕ್ಷಣ ಸಂಸ್ಥೆಗಳಿಗೆ 2010ರಿಂದ 2026ರವರೆಗೆ ಸುಮಾರು 2,400 ಎಕರೆಗೂ ಹೆಚ್ಚು ಭೂಮಿಯನ್ನು ಸರ್ಕಾರ ನೀಡಿದೆ ಎಂದು ವಿವರಿಸಿದರು. ಈ ಅವಧಿಯಲ್ಲಿ ಎಲ್ಲಾ ಸರ್ಕಾರಗಳೂ ಜಮೀನು ನೀಡಿವೆ ಎಂದ ಅವರು, ಪಡೆದ ಉದ್ದೇಶಕ್ಕೆ ಜಮೀನುಗಳನ್ನು ಬಳಸಿಕೊಳ್ಳುತ್ತಿದ್ದಾರೆಯೇ ಎಂದು ಪರಿಶೀಲಿಸಲು 2020ರಲ್ಲೇ ಡಿಸಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಯಾರು ಉಪಯೋಗ ಮಾಡಿಲ್ಲವೋ ಅಥವಾ ಕೇಳಿದ ಉದ್ದೇಶಕ್ಕೆ ಬಳಕೆಯಾಗದೇ ಹೋಗಿದೆಯೋ, ಆ ಜಮೀನನ್ನು ವಾಪಸ್ ಪಡೆಯಲಾಗುವುದು ಎಂದು ಸ್ಪಷ್ಟಪಡಿಸಿದ ಡಿಸಿಎಂ, ಸಂಘ ಸಂಸ್ಥೆಗಳಿಗೆ ಜಮೀನು ಕೊಡುವುದಕ್ಕೆ ನಿಯಮಗಳಿದ್ದು, ಅದರ ಅನ್ವಯವೇ ಭೂಮಿ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದರು.

# ಕಾಯಕ ತತ್ವ ಆಚರಿಸಿದರೆ ಬದುಕು ಸಮೃದ್ಧ

### ಬಸವ ಯೋಗ ಮಂದಿರದಲ್ಲಿ ಸಾಪ್ತಾಹಿಕ ವಚನ ಶ್ರಾವಣ-2026

**ವಿಜಯಸಾಕ್ಷಿ ಸುದ್ದಿ, ಗದಗ**

ಕಾಯಕ ಎಂದರೆ ಕೇವಲ ದುಡಿಮೆಯಲ್ಲ. ಫಲಾಪೇಕ್ಷೆ ಇಲ್ಲದೆ ಶ್ರದ್ಧೆ, ಭಕ್ತಿ, ಕೌಶಲ್ಯ ಹಾಗೂ ನಿಸ್ವಾರ್ಥದಿಂದ ಮಾಡುವ ಕಾರ್ಯವೇ ನಿಜವಾದ ಕಾಯಕ. ಅದರೊಂದಿಗೆ ದಾಸೋಹ ಸೇವೆ ಸೇರಿದಾಗ ಕಾಯಕ ಪರಿಪಕ್ವವಾಗುತ್ತದೆ ಎಂದು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹೇಳಿದರು. ಬಸವ ಯೋಗ ಮಂದಿರದಲ್ಲಿ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ, ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ವಚನಪಾಠಶಾಲೆ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ ಸಾಪ್ತಾಹಿಕ ವಚನ ಶ್ರಾವಣ-2026 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಚನಾರ್ಥ ಚಿಂತಕರಾಗಿ ಆಗಮಿಸಿದ್ದ ಕೆ.ಎಲ್.ಇ. ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಉಪನ್ಯಾಸಕಿ ವೀಣಾ ತಿರ್ಲಾಪೂರ, ಶರಣೆ ಲಕ್ಕಮ್ಮನ ವಚನವನ್ನು ವಿಶ್ಲೇಷಿಸಿ, ಮಹಿಳೆಯರು ತಮ್ಮ ಕಾಯಕ ಹಾಗೂ ಜವಾಬ್ದಾರಿಗಳನ್ನು ಅರಿತು ಕುಟುಂಬಕ್ಕೆ ಉತ್ತಮ ಸಂಸ್ಕಾರ ನೀಡಬೇಕು ಎಂದರು.

ನಿವೃತ್ತ ಶಿಕ್ಷಕಿ ಜಯಶ್ರೀ ಸಂಶಿ ಮಾತನಾಡಿ, ಯಾವುದೇ ಕಾಯಕವನ್ನು ಏಕಮನಸ್ಸಿನಿಂದ, ಅಹಂಕಾರವಿಲ್ಲದೆ ಶ್ರದ್ಧೆಯಿಂದ ಮಾಡಿದಾಗ ಕಾಯಕಯೋಗಿಯಾಗಲು ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಮಾತನಾಡಿ, ದೇವರಿಗೆ ಅಪ್ರಿಯವಾದ, ಸಮಾಜಕ್ಕೆ ದ್ರೋಹ ಬಗೆಯುವ ಹಾಗೂ ಪರರಿಗೆ ನೋವು ನೀಡುವ ಕಾರ್ಯಗಳನ್ನು ಮಾಡದೆ ಶರಣರು ತೋರಿದ ಸತ್ಯ-ಶುದ್ಧ ಕಾಯಕವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ವಿವೇಕಾನಂದಗೌಡ ಪಾಟೀಲ, ವೀಣಾ ತಿರ್ಲಾಪೂರ ಹಾಗೂ ಜಯಶ್ರೀ ಸಂಶಿ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ನಿವೃತ್ತ ಕೃಷಿ ವಿಜ್ಞಾನಿ ಡಾ. ಎಸ್.ಕೆ. ನಾಲತ್ವಾಡಮಠ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಜಯಶ್ರೀ ದಾವಣಗೇರಿ ಪ್ರಾರ್ಥಿಸಿದರು. ವಿಣಾಶ್ರೀ ಮಾಲಿಪಾಟೀಲ ಸ್ವಾಗತಿಸಿದರು. ವಿಜಯಾ ಚನ್ನಶೆಟ್ಟಿ ನಿರೂಪಿಸಿದರು. ವಿಜಯಲಕ್ಷ್ಮೀ ಮೇಕಳಿ ವಂದಿಸಿದರು.




> ನಾವು ಯಾವುದೇ ಕಾಯಕ ಮಾಡಿದರೂ ಅದು ಸಮಾಜಮುಖಿಯಾಗಿರಬೇಕು. ಕಾಯಕ ತತ್ವವನ್ನು ಅರಿತು ಆಚರಿಸಿದರೆ ನಮ್ಮ ಬದುಕು ಸಮೃದ್ಧಿಯಾಗಲು ಸಾಧ್ಯ. ಸಮಾಜದಲ್ಲಿ ಹೆಚ್ಚುತ್ತಿರುವ ಮೇಲು-ಕೀಳು, ಬಡವ-ಶ್ರೀಮಂತ ಹಾಗೂ ಜಾತಿ ಆಧಾರಿತ ಯೋಚನೆಗಳು ದೂರವಾಗಬೇಕಾದರೆ ನಾವೆಲ್ಲರೂ ಕಾಯಕ ಮತ್ತು ನಮ್ಮ ಜವಾಬ್ದಾರಿಗಳನ್ನು ಪ್ರಾಮಾಣಿಕವಾಗಿ ಪಾಲಿಸಬೇಕು.
>
> - ವಿವೇಕಾನಂದಗೌಡ ಪಾಟೀಲ

# ಹಿಂದುಳಿದ ವರ್ಗಗಳ ಪತ್ರಕರ್ತರಿಗೆ ಮೀಡಿಯಾ ಕಿಟ್: ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಹಿಂದುಳಿದ ವರ್ಗಗಳ ಸಮುದಾಯಕ್ಕೆ ಸೇರಿದ ಕಾರ್ಯನಿರತ ಪತ್ರಕರ್ತರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ 2026-27ನೇ ಸಾಲಿನ ಮೀಡಿಯಾ ಕಿಟ್ ವಿತರಿಸಲು ಅರ್ಜಿ ಆಹ್ವಾನಿಸಿದೆ. ಇಲಾಖೆಯ ಮಾಧ್ಯಮ ಮಾನ್ಯತೆ ಕಾರ್ಡ್ ಹೊಂದಿರುವ ಕಾರ್ಯನಿರತ ಪತ್ರಕರ್ತರು ಅರ್ಜಿ ಸಲ್ಲಿಸಬಹುದು. ಹವ್ಯಾಸಿ ಮಾನ್ಯತೆ ಕಾರ್ಡ್ ಹೊಂದಿರುವವರು ಹಾಗೂ ಈ ಹಿಂದೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಥವಾ ಸರ್ಕಾರದ ವ್ಯಾಪ್ತಿಯ ಅಕಾಡೆಮಿ, ನಿಗಮ, ಮಂಡಳಿ ಸೇರಿದಂತೆ ಯಾವುದೇ ಸಂಸ್ಥೆಯಿಂದ ಮೀಡಿಯಾ ಕಿಟ್ ಪಡೆದಿರುವವರಿಗೆ ಈ ಬಾರಿ ಅರ್ಜಿ ಸಲ್ಲಿಸಲು ಅವಕಾಶವಿಲ್ಲ. ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲಾ ವಾರ್ತಾಧಿಕಾರಿಗಳನ್ನು ಅಥವಾ ಬೆಂಗಳೂರಿನ ಕೇಂದ್ರ ಕಚೇರಿಯ ಸುದ್ದಿ ಮತ್ತು ಪತ್ರಿಕಾ ವಿಭಾಗವನ್ನು ಸಂಪರ್ಕಿಸಬಹುದು.

## ಅಸಮಾನತೆ, ಮೌಢ್ಯ ಇನ್ನೂ ಜೀವಂತ: ಡಾ. ತೋಂಟದ ಸಿದ್ಧರಾಮ ಶ್ರೀಗಳ ವಿಷಾದ

# 21ನೇ ಶತಮಾನದಲ್ಲೂ ಸಮಾನತೆ ಸಾಧಿಸುವಲ್ಲಿ ವಿಫಲ

**ವಿಜಯಸಾಕ್ಷಿ ಸುದ್ದಿ, ಗದಗ**

ವಿಜ್ಞಾನ, ತಂತ್ರಜ್ಞಾನ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಭಾರತ ಜಾಗತಿಕ ಮಟ್ಟದಲ್ಲಿ ಬೆಳವಣಿಗೆ ಸಾಧಿಸಿದ್ದರೂ, ಆಧುನಿಕ ಯುಗದಲ್ಲಿಯೂ ಅಸಮಾನತೆ ಮತ್ತು ಮೌಢ್ಯ ಆಚರಣೆಗಳು ಸಮಾಜದಲ್ಲಿ ಬೇರೂರಿವೆ. 21ನೇ ಶತಮಾನದಲ್ಲಿಯೂ ಸಮಾನತೆ ಸಾಧಿಸುವಲ್ಲಿ ನಾವು ವಿಫಲರಾಗಿರುವುದು ವಿಷಾದನೀಯ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.



ಲಿಂಗಾಯತ ಪ್ರಗತಿಶೀಲ ಸಂಘದ ವತಿಯಿಂದ ನಡೆದ 2811ನೇ ಶಿವಾನುಭವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಮಹಾವೀರ, ಬುದ್ಧ, ಬಸವೇಶ್ವರ, ನಾರಾಯಣ ಗುರು, ಮಹಾತ್ಮ ಗಾಂಧೀಜಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಸೇರಿದಂತೆ ಅನೇಕ ದಾರ್ಶನಿಕರು ಮನುಷ್ಯರ ಮಧ್ಯೆ ಸಮಾನತೆ ತರಲು ಸಮಾಜೋಧಾರ್ಮಿಕ ಆಂದೋಲನ ನಡೆಸಿದ್ದಾರೆ.

ಆದರೂ ಜಾತಿ, ಲಿಂಗ ಹಾಗೂ ವರ್ಣದ ತಾರತಮ್ಯ ಸಂಪೂರ್ಣವಾಗಿ ನಿರ್ಮೂಲನೆಯಾಗದಿರುವುದು ಖೇದಕರ ಎಂದರು. ಪರುಶುರಾಮ ಎಸ್. ಇಳಿಗೇರ ಅವರು ಬರೆದ ಸಮಾನತೆಯ ಹರಿಕಾರ ಬ್ರಹ್ಮಶ್ರೀ ನಾರಾಯಣ ಗುರುಗಳು ಕೃತಿಯನ್ನು ಇದೇ ಸಂದರ್ಭದಲ್ಲಿ ಲೋಕಾರ್ಪಣೆ ಮಾಡಲಾಯಿತು. ಕೃತಿಯ ಪರಿಚಯವನ್ನು ಪರುಶುರಾಮ ಇಳಗೇರ ಮಾಡಿದರು.

ಶರಣರು ಕಂಡ ಅನಾದಿ ಬಸವಣ್ಣ ವಿಷಯ ಕುರಿತು ಪ್ರವಚನ ನೀಡಿದ ಶರಣೆ ಗಿರಿಜಕ್ಕ ಧರ್ಮರೆಡ್ಡಿ, ಬಸವಣ್ಣನವರು ಭಕ್ತಿ ಹಾಗೂ ವಿನಯದ ಭಂಡಾರಿಯಾಗಿದ್ದರು.

ಸಮಾಜಕ್ಕೆ ನಡೆ-ನುಡಿಯ ಮಾರ್ಗ ತೋರಿದ ಪರಮಾರಾಧ್ಯರಾಗಿದ್ದಾರೆ ಎಂದರು.

ಗದಗ ನಗರಸಭೆ ಮಾಜಿ ಉಪಾಧ್ಯಕ್ಷ ಶಂಕರ ಹಾನಗಲ್ಲ ಮಾತನಾಡಿ, ಲಿಂಗೈಕ್ಯ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಶ್ರೀಮಠದಿಂದ ನಾರಾಯಣ ಗುರುಗಳ ಕುರಿತು ಪುರಾಣ ಕಾವ್ಯ ರಚನೆ ಮಾಡಿಸಿರುವುದು ಹೆಮ್ಮೆಯ ಸಂಗತಿ ಎಂದರು.

ಸಂಘದ ಮಾಜಿ ಅಧ್ಯಕ್ಷ ಗಂಗಾಧರ ಹಿರೇಮಠ ಹಾಗೂ ಅವರ ಪತ್ನಿಯನ್ನು ಸನ್ಮಾನಿಸಲಾಯಿತು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ, ಧರ್ಮಗ್ರಂಥ ಪಠಣವನ್ನು ಜೀವನ ನಟರಾಜ ಯಲ್ಬುರ್ಗಿ, ವಚನ ಚಿಂತನವನ್ನು ಮೇಘಾ ಮುದ್ದಿ ನೆರವೇರಿಸಿದರು. ಕರವೀರಯ್ಯ ಶೇಖರಯ್ಯ ಕೋರಿಮಠ ಪರಿವಾರದವರು ಹಾಗೂ ವಿನಾಯಕ ಮಾನ್ವಿ ದಾಸೋಹ ಸೇವೆ ಸಲ್ಲಿಸಿದರು.

ಸಂಘದ ಅಧ್ಯಕ್ಷ ಡಾ. ಉಮೇಶ ಪುರದ ಸ್ವಾಗತಿಸಿದರು. ಡಾ. ರಮೇಶ ಕಲ್ಲನಗೌಡರ ನಿರೂಪಿಸಿದರು. ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಕಾರ್ಯದರ್ಶಿ ಸಿದ್ಧರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಮಠ, ಆದೇಶ ಅಂಗಡಿ ಸೇರಿದಂತೆ ಶ್ರೀಮಠದ ಸದ್ಭಕ್ತರು ಭಾಗವಹಿಸಿದ್ದರು.

> ಮನುಷ್ಯರ ಮಧ್ಯೆ ಸಮಾನತೆಯನ್ನು ತರಲು ಬಸವಣ್ಣನವರು ಇಷ್ಟಲಿಂಗವನ್ನು ನೀಡಿದರು. ಇಷ್ಟಲಿಂಗಧಾರಿಗಳಲ್ಲಿ ಮೇಲು-ಕೀಳು ಇಲ್ಲ ಎಂದು ಸಾರಿದರು. ಕೇರಳದಲ್ಲಿ ನಾರಾಯಣ ಗುರುಗಳು ಅಸಮಾನತೆಯನ್ನು ತೊಡೆದುಹಾಕಲು ಶ್ರಮಿಸಿ ಮಹಾ ಮಾನವತಾವಾದಿ ಯಾದರು. ಸಮಾನತೆಯ ಹರಿಕಾರ ಬ್ರಹ್ಮಶ್ರೀ ನಾರಾಯಣ ಗುರುಗಳು ಕೃತಿಯನ್ನು ಎಲ್ಲರೂ ಓದಿ, ಅವರ ವಿಚಾರಗಳನ್ನು ಜೀವನದಲ್ಲಿ ಅನುಸರಿಸಬೇಕು.
>
> - ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

## ಪ್ರತಿಯೊಂದು ಮಗುವಿನಲ್ಲೂ ಪ್ರತಿಭೆ ಅಡಗಿದೆ; ಅದನ್ನು ಹೊರತರುವುದು ಶಿಕ್ಷಕರ ಹೊಣೆ: ಡಾ. ಸಾಯಿರಾಬಾನು

# ಸರ್ಕಾರಿ ಶಾಲೆ ಮಕ್ಕಳು ದಡ್ಡರಲ್ಲ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ರಾಮನಗರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಯಿತು.

ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಹಾಗೂ ಅಮ್ಮ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಅಧ್ಯಕ್ಷೆ ಡಾ. ಸಾಯಿರಾಬಾನು ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳು ಯಾರೂ ದಡ್ಡರಲ್ಲ. ಪ್ರತಿಯೊಬ್ಬರಲ್ಲೂ ಒಂದಲ್ಲ ಒಂದು ರೀತಿಯ ಆಂತರಿಕ ಪ್ರತಿಭೆ ಇದ್ದೇ ಇರುತ್ತದೆ. ಅದನ್ನು ಗುರುತಿಸಿ ಹೊರತರುವ ಕೆಲಸ ಶಿಕ್ಷಕರು ಮಾಡಬೇಕು ಎಂದು ಹೇಳಿದರು.

ತಾವು ಇದೇ ಶಾಲೆಯಲ್ಲಿ ಓದಿದ ದಿನಗಳನ್ನು ಸ್ಮರಿಸಿದ ಅವರು, ಅಂದಿನ ಹಾಗೂ ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಾಗಿರುವ ಬದಲಾವಣೆಗಳನ್ನು ಮೆಲುಕು ಹಾಕಿದರು. ಸರ್ಕಾರಿ ಶಾಲೆಗಳಲ್ಲಿ ಬಡ ಕುಟುಂಬಗಳ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಓದುತ್ತಿದ್ದು, ಅವರ ಭವಿಷ್ಯ ಉತ್ತಮವಾಗಬೇಕು. ಶಾಲೆಯ ಅಭಿವೃದ್ಧಿಗೆ ತಮ್ಮಿಂದಾದ ಸಹಾಯ-ಸಹಕಾರ ನೀಡುವುದಾಗಿ ತಿಳಿಸಿದರು.

ಪುರಸಭೆ ಮಾಜಿ ಅಧ್ಯಕ್ಷ ಎಂ. ಮರಿರಾಮಪ್ಪ ಮಾತನಾಡಿ, ಎಲ್ಲರಲ್ಲೂ ಸಮಾನತೆ ಇದ್ದಾಗ ಮಾತ್ರ ಉತ್ತಮ ಹಾಗೂ ಸ್ವಸ್ಥ ಸಮಾಜ ನಿರ್ಮಾಣ ಸಾಧ್ಯ. ಅಂತಹ ಸಮಾನತೆಯನ್ನು ಸರ್ಕಾರಿ ಶಾಲೆಗಳಲ್ಲಿ ಕಾಣಬಹುದು ಎಂದರು.

ಪುರಸಭೆ ಸದಸ್ಯ ನವೀನ್ ಸಂಜೋತ್ ಮಾತನಾಡಿ, ಇಂದಿನ ಎಲ್‌ಕೆಜಿ, ಯುಕೆಜಿ ಮಕ್ಕಳೂ ಮೈಕ್ ಹಿಡಿದು ನಿರರ್ಗಳವಾಗಿ ಮಾತನಾಡುವ ಸಾಮರ್ಥ್ಯ ಬೆಳೆಸಿಕೊಂಡಿದ್ದಾರೆ. ಸರ್ಕಾರಿ ಶಾಲಾ ಮಕ್ಕಳಿಗೂ ಇಂತಹ ಎಲ್ಲ ಅವಕಾಶಗಳನ್ನು ಕಲ್ಪಿಸಬೇಕು ಎಂದು ಹೇಳಿದರು.

ಕಾಂಗ್ರೆಸ್ ಮುಖಂಡ ಸೆರೆಗಾರ್ ಹುಚ್ಚಪ್ಪ ಮಾತನಾಡಿ, ಸ್ವಾತಂತ್ರ್ಯ ದೊರೆತು 80 ವರ್ಷಗಳಲ್ಲಿ ದೇಶ ಸಾಕಷ್ಟು ಅಭಿವೃದ್ಧಿ ಸಾಧಿಸಿದೆ. ಇನ್ನಷ್ಟು ಅಭಿವೃದ್ಧಿ ಸಾಧಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

ಮಾಜಿ ಅಧ್ಯಕ್ಷ ಶಾಬುದ್ದೀನ್ ಮಾತನಾಡಿ, ಧರ್ಮ, ಜಾತಿ, ಲಿಂಗ ಹಾಗೂ ಕುಲಭೇದ ಮರೆತು ಸೌಹಾರ್ದತೆಯಿಂದ ಬದುಕಬೇಕು. ಎಲ್ಲರ ರಕ್ತವೂ ಕೆಂಪಾಗಿರುವಾಗ ತಾರತಮ್ಯಕ್ಕೆ ಅವಕಾಶವಿರಬಾರದು. ಸಮಾನತೆಯೇ ನಮ್ಮ ಉಸಿರಾಗಬೇಕು ಎಂದರು.

ಎಸ್‌ಡಿಎಂಸಿ ಅಧ್ಯಕ್ಷೆ ಗಂಗಮ್ಮ ಧ್ವಜಾರೋಹಣ ನೆರವೇರಿಸಿದರು. ಶಿಕ್ಷಕರಾದ ಮುರುಗ ರಾಜೇಂದ್ರ, ಮೂಗಪ್ಪ, ಎಸ್‌ಡಿಎಂಸಿ ಉಪಾಧ್ಯಕ್ಷ ರಾಘವೇಂದ್ರ, ಮಡಿವಾಳರ ಪ್ರಕಾಶ, ಪತ್ರಕರ್ತರಾದ ಸರ್ದಾರ್ ಯಮನೂರಪ್ಪ, ಅಸ್ಲಾಂ ಭಾಷಾ ತೆಲಿಗಿ, ಲಕ್ಷ್ಮಣ ಗೋಣಿಬಸಪ್ಪ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂಕಗಳಿಗಿಂತ ಕಲಿಕೆಯೇ ಮುಖ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆನಂದ ಆಶ್ರಮ ರಸ್ತೆಯಲ್ಲಿರುವ ಪ್ರಕಲ್ಪ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ 3ನೇ ಸಾಪ್ತಾಹಿಕ ಪರೀಕ್ಷೆಯ ಫಲಿತಾಂಶ ಪ್ರಕಟಿಸಲಾಯಿತು.

ವಿದ್ಯಾರ್ಥಿಗಳಲ್ಲಿ ಕಲಿಕೆಯ ಆಸಕ್ತಿ ಹಾಗೂ ಆತ್ಮವಿಶ್ವಾಸ ಹೆಚ್ಚಿಸುವ ಉದ್ದೇಶದಿಂದ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಈ ವಾರದ ತಾರೆಗಳು ಎಂದು ಗುರುತಿಸಿ ಪ್ರೋತ್ಸಾಹಿಸಲಾಯಿತು.

ಅಂಕಗಳಿಗಿಂತ ಕಲಿಕೆಯೇ ಹೆಚ್ಚು ಮುಖ್ಯವಾಗಿದ್ದು, ವಿದ್ಯಾರ್ಥಿಗಳು ನಿರಂತರವಾಗಿ ತಮ್ಮ ಸಾಮರ್ಥ್ಯವನ್ನು ಸುಧಾರಿಸಿಕೊಳ್ಳುವುದೇ ನಿಜವಾದ ಯಶಸ್ಸು ಎಂಬ ಸಂದೇಶವನ್ನು ಈ ಸಂದರ್ಭದಲ್ಲಿ ನೀಡಲಾಯಿತು.

ಪರೀಕ್ಷೆಯ ಫಲಿತಾಂಶವನ್ನು ವಿದ್ಯಾರ್ಥಿಗಳ ಪ್ರಗತಿಯನ್ನು ಗುರುತಿಸುವ ಹಾಗೂ ಮುಂದಿನ ಸಾಧನೆಗೆ ಪ್ರೇರೇಪಿಸುವ ಸಾಧನವಾಗಿ ಬಳಸಲಾಯಿತು.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಶಿಕ್ಷಕರ ಮಾರ್ಗದರ್ಶನ ಹಾಗೂ ಪ್ರೋತ್ಸಾಹವೂ ಪ್ರಮುಖ ಪಾತ್ರ ವಹಿಸಿತು. ಮುಕ್ತಾ ಭಜಂತ್ರಿ, ಪುಷ್ಪಾ ಮೇಗೇರಿ, ನಜಿಯಾ ಎನ್.ಎ. ಅಲಡ್ಕಟ್ಟಿ, ಪರ್ವಿನ್ ಉಕ್ಕಳ್ಳಿ, ಹೀನಾ, ಸುರೇಖಾ, ಶೋಭಾ, ತೇಜಶ್ವಿನಿ ಹಾಗೂ ಅನುಪಮಾ ಸೇರಿದಂತೆ ಶಿಕ್ಷಕರು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿದರು.

ವಿದ್ಯಾರ್ಥಿಗಳು ತಮ್ಮ ಫಲಿತಾಂಶದಿಂದ ಆತ್ಮವಿಶ್ವಾಸ ಪಡೆದು ಮುಂದಿನ ಪರೀಕ್ಷೆಗಳಲ್ಲಿ ಇನ್ನಷ್ಟು ಉತ್ತಮ ಸಾಧನೆ ಮಾಡುವಂತೆ ಶಿಕ್ಷಕರು ಹುರಿದುಂಬಿಸಿದರು.




## ಕೆ.ಎಚ್. ಪಾಟೀಲ ಅಟೋನಗರ ಉದ್ಘಾಟಿಸಿದ ಶಾಸಕ ಎಚ್.ಕೆ. ಪಾಟೀಲ

# ಶ್ರಮಿಕರ ಬದುಕಿಗೆ ಹೊಸ ಬಲ ನೀಡಿದ ಕೆ.ಎಚ್. ಪಾಟೀಲರ ಕನಸು

**ವಿಜಯಸಾಕ್ಷಿ ಸುದ್ದಿ, ಗದಗ**

ರೈತರು, ಕೃಷಿ ಕೂಲಿ ಕಾರ್ಮಿಕರು ಸೇರಿದಂತೆ ಶ್ರಮಿಕ ವರ್ಗದ ಆರ್ಥಿಕ ಹಾಗೂ ಸಾಮಾಜಿಕ ಉನ್ನತಿಗಾಗಿ ಸದಾ ಚಿಂತಿಸಿದ ದಿ. ಕೆ.ಎಚ್. ಪಾಟೀಲ ಅವರ ಹೆಸರಿನಲ್ಲಿ ಶ್ರಮಿಕರ ದುಡಿಮೆಯ ಸ್ಥಳವಾದ ಅಟೋನಗರ ನಿರ್ಮಾಣಗೊಂಡಿರುವುದು ಸಂತಸದ ಸಂಗತಿ ಎಂದು ಶಾಸಕ ಎಚ್.ಕೆ. ಪಾಟೀಲ ಹೇಳಿದರು.



ಹುಬ್ಬಳ್ಳಿ ರಸ್ತೆಯ ಕೆಇಬಿ ಗ್ರಿಡ್ ಬಳಿಯಲ್ಲಿ ಫೋರ್ ವ್ಹೀಲರ್ ಮೆಕ್ಯಾನಿಕಲ್ ಹಾಗೂ ಬಾಡಿ ವರ್ಕ್ಸ್ ಅಸೋಸಿಯೇಶನ್ ವತಿಯಿಂದ ಆಯೋಜಿಸಿದ್ದ ಕೆ.ಎಚ್. ಪಾಟೀಲ ಅಟೋನಗರ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಅಟೋನಗರದ ನಿರ್ಮಾಣಕ್ಕೆ ಸಂಬಂಧಿಸಿದಂತೆ ತಾವು ನೀಡಿದ ಸಲಹೆ-ಸೂಚನೆಗಳನ್ನು ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಉತ್ತಮವಾಗಿ ಅನುಷ್ಠಾನಗೊಳಿಸಿದ್ದು, ನಿರ್ಮಿಸಿರುವ ಶೆಡ್‌ಗಳ ಕಾರ್ಯ ತೃಪ್ತಿಕರವಾಗಿದೆ.

ಇನ್ನಷ್ಟು ಶ್ರಮಿಕರು ಇಲ್ಲಿ ತಮ್ಮ ಕಾರ್ಯಚಟುವಟಿಕೆ ನಡೆಸಲು ಆಸಕ್ತಿ ತೋರಿಸುತ್ತಿರುವ ಹಿನ್ನೆಲೆಯಲ್ಲಿ ಮುಂದಿನ ಮಾರ್ಚ್ 16ರೊಳಗೆ ಸಂಘಕ್ಕೆ ಮತ್ತಷ್ಟು ಎರಡು ಎಕರೆ ಜಮೀನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಹೇಳಿದರು.

> ಕಾರ್ಮಿಕರ ಅಗತ್ಯಗಳನ್ನು ಗಮನಿಸಿ ಶಾಸಕ ಎಚ್.ಕೆ. ಪಾಟೀಲರು ನೀಡಿದ ಸಹಕಾರ ಹಾಗೂ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಉತ್ತಮ ಬದುಕು ರೂಪಿಸಿಕೊಳ್ಳುತ್ತೇವೆ.
>
> - ಉಸ್ಮಾನ ಮಾಳೆಕೊಪ್ಪ, ಅಸೋಸಿಯೇಶನ್ ಅಧ್ಯಕ್ಷ

ಹೆಸ್ಕಾಂ ಅಧ್ಯಕ್ಷ ಶಾಸಕ ಅಜ್ಜಂಪೀರ ಖಾದ್ರಿ ಮಾತನಾಡಿ, ಅಟೋನಗರದಲ್ಲಿ ಆರಂಭವಾಗಲಿರುವ ಕಾರ್ಮಿಕರ ಉದ್ದಿಮೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಲ್ಲಿ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹುಬ್ಬಳ್ಳಿ-ಧಾರವಾಡ ಮಾಜಿ ಮಹಾಪೌರ ಅನಿಲಕುಮಾರ ಪಾಟೀಲ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಸಾದಿಕ ನರಗುಂದ, ರಜಾಕ ಡಂಕೇದ, ಬಿ.ಎಂ. ನದ್ದಿಮುಲ್ಲಾ, ನಿಂಗಪ್ಪ ಎಂಬತ್ನಾಳ, ಸಯ್ಯದ ಜಮೀರ ಖಾಜಿ, ಮಹಮ್ಮದ್ ರಫೀಕ ನವಲಗುಂದ, ಮೈನುದ್ದೀನ ನಾಗಡ, ಮಹಮ್ಮದ್ ಅಲಿ ಕಲೆಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಛಾಯಾಗ್ರಹಣ ದಿನಾಚರಣೆ; ವಿಶೇಷ ಮಕ್ಕಳೊಂದಿಗೆ ಸಂಭ್ರಮ!



**ವಿಜಯಸಾಕ್ಷಿ ಸುದ್ದಿ, ಗದಗ**

187ನೇ ವಿಶ್ವ ಛಾಯಾಗ್ರಹಣ ದಿನಾಚರಣೆಯ ಅಂಗವಾಗಿ ಗದಗ ಜಿಲ್ಲಾ ಛಾಯಾಗ್ರಾಹಕ ಕ್ಷೇಮಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ವತಿಯಿಂದ ಬೆಟಗೇರಿಯ ಮಂಜು ಶಿಕ್ಷಣ ಸಂಸ್ಥೆಯ ಬುದ್ಧಿಮಾಂದ್ಯ ಮಕ್ಕಳ ಶಾಲೆಯಲ್ಲಿ ಅರ್ಥಪೂರ್ಣವಾಗಿ ಕಾರ್ಯಕ್ರಮ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಕ್ಯಾಮೆರಾದ ಪಿತಾಮಹ ಲೂಯಿಸ್ ಡಾಗ್ಯುರೆ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಮಕ್ಕಳಿಗೆ ಬೆಳಗಿನ ಉಪಹಾರ ವಿತರಿಸಲಾಯಿತು.

ಮಂಜು ಶಿಕ್ಷಣ ಸಂಸ್ಥೆಯ ಚೇರ್ಮನ್ ಶಂಕರ ಸಿಂಗ ರಜಪೂತ ಮಾತನಾಡಿ, ಛಾಯಾಗ್ರಾಹಕರ ಸಂಘದ ವತಿಯಿಂದ ವಿಶೇಷ ಮಕ್ಕಳೊಂದಿಗೆ ವಿಶ್ವ ಛಾಯಾಗ್ರಹಣ ದಿನಾಚರಣೆ ಆಚರಿಸಿರುವುದು ಸಂತಸದ ಸಂಗತಿ ಎಂದರು.

ಗದಗ ಜಿಲ್ಲಾ ಛಾಯಾಗ್ರಾಹಕರ ಸಂಘದ ಜಿಲ್ಲಾಧ್ಯಕ್ಷ ಪವನ್ ಕೆ. ಮೆಹರವಾಡೆ ಮಾತನಾಡಿ, ಹುಟ್ಟುಹಬ್ಬ ಸೇರಿದಂತೆ ಖಾಸಗಿ ಕಾರ್ಯಕ್ರಮಗಳಿಗೆ ಅನಗತ್ಯವಾಗಿ ಹಣ ಖರ್ಚು ಮಾಡುವ ಬದಲು ಇಂತಹ ಸಂಸ್ಥೆಗಳಿಗೆ ಭೇಟಿ ನೀಡಿ ವಿಶೇಷ ಮಕ್ಕಳಿಗೆ ಕೈಲಾದಷ್ಟು ನೆರವು ನೀಡಬೇಕು. ಉಪಹಾರ ಅಥವಾ ಊಟದ ವ್ಯವಸ್ಥೆ ಮಾಡುವ ಮೂಲಕ ಸೇವಾ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸದಸ್ಯರಿಗೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಪವನ್ ಕೆ. ಮೆಹರವಾಡೆ ಅವರ ಪುತ್ರಿಯ ಹುಟ್ಟುಹಬ್ಬವನ್ನು ಸಹ ಮಕ್ಕಳೊಂದಿಗೆ ಆಚರಿಸಲಾಯಿತು. ಮಕ್ಕಳೊಂದಿಗೆ ಹುಟ್ಟುಹಬ್ಬ ಆಚರಿಸಿದ್ದು ಕಾರ್ಯಕ್ರಮದ ವಿಶೇಷವಾಗಿತ್ತು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ವೈಜನಾಥ ಕೌತಾಳ, ಗೌರವಾಧ್ಯಕ್ಷ ರಂಜಿತ್ ಬೇವಿನಕಟ್ಟಿ, ಕಾರ್ಯದರ್ಶಿ ಮಾದೇಗೌಡ ಸಂಕನಗೌಡ್ರು, ಕೆಪಿಎ ನಿರ್ದೇಶಕ ಮಂಜುನಾಥ ಲಕ್ಷಟ್ಟಿ ಹಾಗೂ ಸದಸ್ಯರಾದ ಸುರೇಶ್ ಮಿಸ್ಕಿನ್, ರಾಮು ಕಠಾರೆ, ರಾಜು ಬಾಕಳೆ, ಶಂಕರ್ ಬಾಕಳೆ, ಬಿಲಾಲ, ವೀರೇಶ್ ಗೌಡರ, ರವೀಂದ್ರ ಕೊಳ್ಳಿ, ಮಲ್ಲಿಕಾರ್ಜುನ ಬ್ಯಾಹಟ್ಟಿ, ದೀಪಕ್ ಬಾಕಳೆ, ನಾಗರಾಜ್ ಶಿದ್ಲಿಂಗ, ರವಿ ಬಳಿಗೇರ, ಬಾಬಣ್ಣ ಶಿದ್ಲಿಂಗ, ವಾದಿರಾಜ ಕುಲಕರ್ಣಿ, ಹನುಮಂತ, ಪ್ರಕಾಶ, ಚಿದಾನಂದ, ಮಂಜುನಾಥ ಮೆಹರವಾಡೆ, ತುಕಾರಾಂ ಪಾಂಡ್ರೆ, ಕೃಷ್ಣಾ ಪವಾರ ಹಾಗೂ ಶ್ರೀಧರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 11 ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಕ್ರಮ; ಆಕ್ಷೇಪಣೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಕಾರ್ಯಾಚರಣೆ ನಡೆಸದೆ ಸಂಪೂರ್ಣ ಸ್ಥಗಿತಗೊಂಡಿರುವ ಜಿಲ್ಲೆಯ 11 ಸಹಕಾರ ಸಂಘಗಳ ನೋಂದಣಿ ರದ್ದುಗೊಳಿಸಲು ಸಹಕಾರ ಇಲಾಖೆ ಕ್ರಮ ಕೈಗೊಳ್ಳುತ್ತಿದೆ. ಈ ಕುರಿತು ಸಂಬಂಧಪಟ್ಟ ಸದಸ್ಯರು ಹಾಗೂ ಸಾರ್ವಜನಿಕರಿಗೆ ಆಕ್ಷೇಪಣೆ ಸಲ್ಲಿಸಲು ಏಳು ದಿನಗಳ ಕಾಲಾವಕಾಶ ನೀಡಲಾಗಿದೆ. ಸಂಘಗಳಲ್ಲಿ 5ರಿಂದ 10 ವರ್ಷಗಳಿಂದ ಲೆಕ್ಕಪರಿಶೋಧನೆ ನಡೆದಿಲ್ಲ. ನಿಗದಿತ ಅವಧಿಯಲ್ಲಿ ಚುನಾವಣೆ ಹಾಗೂ ವಾರ್ಷಿಕ ಮಹಾಸಭೆ ನಡೆದಿಲ್ಲ. ಸಂಘಗಳನ್ನು ಪುನಶ್ಚೇತನಗೊಳಿಸಲು ಆಡಳಿತ ಮಂಡಳಿ ಹಾಗೂ ಸಾಮಾನ್ಯ ಸದಸ್ಯರು ಆಸಕ್ತಿ ತೋರಿಸದಿರುವುದು, ಅಥವಾ ಪತ್ರಿಕೆಗಳು ಹಾಗೂ ಆಡಳಿತ ಮಂಡಳಿ ಸದಸ್ಯರ ವಿಳಾಸ ಲಭ್ಯವಿಲ್ಲದಿರುವ ಹಿನ್ನೆಲೆಯಲ್ಲಿ ನೋಂದಣಿ ರದ್ದತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ್ದಾರೆ.

ನೋಂದಣಿ ರದ್ದತಿಗೆ ಒಳಪಡಲಿರುವ ಸಂಘಗಳಲ್ಲಿ ವರ್ಧಮಾನ ಅಲ್ಪಸಂಖ್ಯಾತರ ಪತ್ತಿನ ಸಹಕಾರ ಸಂಘ, ಗಜೇಂದ್ರಗಡ; ನರೇಗಲ್ ಅರ್ಬನ್ ಪತ್ತು ಬೆಳೆಸುವವರ ಸಹಕಾರ ಸಂಘ, ನರೇಗಲ್; ವರವೀರಭದ್ರೇಶ್ವರ ಮನೆ ಕಟ್ಟುವವರ ಸಹಕಾರ ಸಂಘ, ಕುರಡಗಿ; ಶ್ರೀ ಮಾರುತೇಶ್ವರ ಪತ್ತಿನ ಸಹಕಾರ ಸಂಘ, ಕುರಹಟ್ಟಿ; ಜಯಪ್ರಕಾಶ ಪ್ರಿಂಟಿಂಗ್ ಕೋ-ಆಪ್ ಸೊಸೈಟಿ, ಗದಗ; ಮದಗಾನೂರ ಹಾಲು ಉತ್ಪಾದಕರ ಸಹಕಾರ ಸಂಘ; ಹೊಸಡಂಬಳ ಹಾಲು ಉತ್ಪಾದಕರ ಸಹಕಾರ ಸಂಘ; ಮೌಲಾನಾ ಆಜಾದ್ ವಿವಿಧೋದ್ದೇಶಗಳ ಸಹಕಾರ ಸಂಘ, ಗದಗ; ಶ್ರೀ ಬೂದೇಶ್ವರ ಕುರಿ ಮತ್ತು ಉಣ್ಣೆ ಮಾರಾಟ ಹಾಗೂ ಸಂಸ್ಕರಣ ಸಹಕಾರ ಸಂಘ, ಹೊಸಳ್ಳಿ; ಶ್ರೀ ಆದಿಶಕ್ತಿ ಎಸ್‌ಸಿ/ಎಸ್‌ಟಿ ವಿವಿಧೋದ್ದೇಶಗಳ ಸಹಕಾರ ಸಂಘ, ಬೆಳದಡಿ ಹಾಗೂ ಶ್ರೀ ಕೃಷ್ಣ ಕೈಮಗ್ಗ ಮತ್ತು ಪೀಠೋಪಕರಣ ತಯಾರಕರ ಕೈಗಾರಿಕಾ ಸಹಕಾರ ಸಂಘ, ಗದಗ-ಬೆಟಗೇರಿ ಸೇರಿವೆ. ಈ ಸಂಘಗಳಿಂದ ಸದಸ್ಯರಿಗೆ ಬರಬೇಕಾದ ಹಣ, ಪಿಗ್ಮಿ ಅಥವಾ ಠೇವಣಿ ಇದ್ದಲ್ಲಿ ಸಂಬಂಧಪಟ್ಟ ಸದಸ್ಯರು ಹಾಗೂ ಸಾರ್ವಜನಿಕರು ಕಚೇರಿ ವೇಳೆಯಲ್ಲಿ ಮೂಲ ದಾಖಲೆಗಳೊಂದಿಗೆ ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಜಿಲ್ಲಾಡಳಿತ ಭವನದ ಕೊಠಡಿ ಸಂಖ್ಯೆ 125ಕ್ಕೆ ಭೇಟಿ ನೀಡಿ ಆಕ್ಷೇಪಣೆ ಸಲ್ಲಿಸಬಹುದು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka